ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 116 Pages : 4 Price : 3.00 Sunday June 9 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಂಸ್ಕೃತ ಸಂಭಾಷಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, , ಗದಗ

ಗದುಗಿನ ಹಾತಲಗೇರಿ ರಸ್ತೆ ಸಾಯಿಬಾಬಾ ಗುಡಿ ಹತ್ತಿರ ಇರುವ ಪತಂಜಲಿ ಯೋಗ ಮಂದಿರದಲ್ಲಿ ಜೂನ್ 10ರಿಂದ ಜೂನ್ 19ರವರೆಗೆ ಸಂಜೆ 6ರಿಂದ 8 ಗಂಟೆವರೆಗೆ ಸಂಸ್ಕೃತ ಸಂಭಾಷಣೆ ಶಿಬಿರವನ್ನು ಏರ್ಪಡಿಸಲಾಗಿದೆ.

10 ದಿನಗಳಲ್ಲಿ ಸಂಸ್ಕೃತ ಸಂಭಾಷಣೆ ಕಲಿಸಲಾಗುವುದು. ಆಸಕ್ತರು 7676291968, 8951348235 ಈ ಸಂಖ್ಯೆಗಳಿಗೆ ಸಂಪರ್ಕಿಸಿ ಹೆಸರು ನೋಂದಾಯಿಸಲು ಸಂಸ್ಕೃತ ಭಾರತೀ ಕರ್ನಾಟಕ ಉತ್ತರ ಪ್ರಾಂತದ ಪ್ರಕಟಣೆ ತಿಳಿಸಿದೆ.

## ಪ್ರತಿಭಾ ಪುರಸ್ಕಾರ, ನಿವೃತ್ತರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, , ಗದಗ

ಅಖಿಲ ಭಾರತ ಗಾಣಿಗರ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ವತಿಯಿಂದ ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಿಲ್ಲಾ ಗಾಣಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ಪ್ರಸಕ್ತ ಸಾಲಿನಲ್ಲಿ ನಿವೃತ್ತರಾದ ಗಾಣಿಗ ಸಮಾಜದ ಸರಕಾರಿ ನೌಕರರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅರ್ಹ ವಿದ್ಯಾರ್ಥಿಗಳು ಹಾಗೂ ನಿವೃತ್ತ ಸರಕಾರಿ ನೌಕರರು ಜೂ.25ರರೊಳಗಾಗಿ ಅಂಕಪಟ್ಟಿಯ ನಕಲು ಪ್ರತಿ, ಒಂದು ಭಾವಚಿತ್ರವನ್ನು ವಿವೇಕಾನಂದ ನಗರದ ಗಾಣಿಗ ಭವನದ ಕಾರ್ಯಾಲಯದಲ್ಲಿ, ಎಪಿಎಂಸಿ ಯಾರ್ಡ್‌ನಲ್ಲಿರುವ ಎಂ.ಬಿ. ಬಡ್ನಿ ದಲಾಲಿ ಅಂಗಡಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ– 9448142509, 9945037111, 779582695 ಅವರನ್ನು ಸಂಪರ್ಕಿಸಬೇಕು ಎಂದು ಅಖಿಲ ಭಾರತ ಗಾಣಿಗರ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ಕಾರ್ಯದರ್ಶಿ ಮುರಘರಾಜೇಂದ್ರ ಬಡ್ನಿ ತಿಳಿಸಿದ್ದಾರೆ.

## ರಾಜ್ಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎಸ್.ಎಮ್. ಕೃಷ್ಣ ನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ–12ರ ವಿದ್ಯಾರ್ಥಿನಿ ಸಹನಾ ಮಹಾಂತೇಶ ಸಂಗಮದ ಇನ್‌ಸ್ಪೈಯರ್ ಆವಾರ್ಡ್ ಮಾನಕ್ ಕಾಂಪಿಟೇಶನಲ್ಲಿ 'ಫಾರೆಸ್ಟ್ ಫೈರ್ ಡಿಟೆಕ್ಷನ್ ಮತ್ತು ಪ್ರಿವೆನ್ಷನ್ ಸಿಸ್ಟಮ್' (ಕಾಡ್ಗಿಚ್ಚು ಗುರುತಿಸಿ ಸ್ವಯಂ ನಿಯಂತ್ರಿಸುವ ಯಂತ್ರ) ಮಾದರಿಯು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದೆ.

ಸಾಧಕ ವಿದ್ಯಾರ್ಥಿನಿ ಹಾಗೂ ತರಬೇತಿ ನೀಡಿದ ಮಾರ್ಗದರ್ಶಿ ಶಿಕ್ಷಕರಾದ ಎಮ್.ಕೆ. ಹುಯಿಲಗೋಳ ಇವರಿಗೆ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಪಾಲಕರು, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಸಹ ಶಿಕ್ಷಕರು ಅಭಿನಂದಿಸಿದ್ದಾರೆ.

## ಧರ್ಮಸ್ಥಳ ಸಂಸ್ಥೆಯಿಂದ ವ್ಹೀಲ್‌ಚೇರ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಕಡಕೋಳ ಗ್ರಾಮದ ಸುಶೀಲಮ್ಮ ಕಮ್ಮಾರ ಅವರಿಗೆ ವ್ಹೀಲ್ ಚೇರ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಯೋಜನಾಧಿಕಾರಿ ಪುನೀತ್ ಓಲೇಕಾರ, ಕಳೆದ ನಾಲ್ಕು ವರ್ಷಗಳ ಹಿಂದೆ ರಸ್ತೆ ಅಪಘಾತದಿಂದ ತಮ್ಮ ಕಾಲುಗಳಲ್ಲಿ ನಡೆದಾಡುವ ಶಕ್ತಿಯನ್ನು ಕಳೆದುಕೊಂಡು ಸಂಕಷ್ಟದಲ್ಲಿದ್ದಾಗ, ಡಾ. ವೀರೇಂದ್ರ ಹೆಗ್ಗಡೆ ಮತ್ತು ಅಮ್ಮನವರು ಜನ ಮಂಗಳ ಕಾರ್ಯಕ್ರಮದಡಿ ಕೊಡ ಮಾಡಿರುವ ವ್ಹೀಲ್‌ಚೇರ್ ಮತ್ತು ಪರಿಕರಗಳನ್ನು ವಿತರಿಸಲಾಗಿದೆ. ಇದರಿಂದ ಈ ಕುಟುಂಬಕ್ಕೆ ಹೊಸಚೈತನ್ಯ ಬಂದಂತಾಗಿದೆ ಎಂದರು.

ಪ.ಪಂ ಸದಸ್ಯ ಫಕ್ಕೀರೇಶ ರಟ್ಟಿಹಳ್ಳಿ, ಮರಿಯಪ್ಪ ಎಸ್, ಯಲ್ಲಮ್ಮ ಬಿ ಮುಂತಾದವರು ಉಪಸ್ಥಿತರಿದ್ದರು.

## ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಮಧ್ವ ಮಹಾ ಪರಿಷತ್ ಗದಗ ಶಾಖೆಯ ವತಿಯಿಂದ ಜೂನ್ 22ರಂದು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ. 80 ಹಾಗೂ ಮೇಲ್ಪಟ್ಟು ಅಂಕ ಗಳಿಸಿದ ತ್ರಿಮತಸ್ಥ ಬ್ರಾಹ್ಮಣ ವಿದ್ಯಾರ್ಥಿಗಳು ಪುರಸ್ಕಾರಕ್ಕೆ ಅರ್ಹರಾಗಿದ್ದು, ಶೈಕ್ಷಣಿಕ ಸಹಾಯಧನ ಬಯಸುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಜೂನ್ 20 ಪುರಸ್ಕಾರ ಹಾಗೂ ಸಹಾಯಧನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ– 9481737300, 8971935499, 9449002001 ಸಂಪರ್ಕಿಸಲು ವಿಶ್ವ ಮಧ್ವ ಮಹಾಪರಿಷತ್‌ನ ಪ್ರಕಟಣೆ ಕೋರಿದೆ.

### ಸರ್ಕಾರದಿಂದ ಲಭ್ಯವಾಗದ ಪ್ರೋತ್ಸಾಹಧನ । ಅತಂತ್ರ ಸ್ಥಿತಿಯಲ್ಲಿ ನೇಕಾರರ ಬದುಕು

# ನಡುನೀರಲ್ಲಿ ಕೈಬಿಟ್ಟ ಕೈಮಗ್ಗ ನಿಗಮ

■ವಿಜಯಸಾಕ್ಷಿ ಸುದ್ದಿ, ಗದಗ

ವಿಧ ವಿಧದ ಬಟ್ಟೆ ನೇಯುವ ಮೂಲಕ ಎಲ್ಲರ ಮಾನ ಮುಚ್ಚುವ ನೇಕಾರರ ಬದುಕು ಎಂದಿಗೂ ಹರಿದ ಬಟ್ಟೆಯಂತೆಯೇ. ಅತ್ತ ತೊಡಲೂ ಆಗದು, ಇತ್ತ ಬಿಸಾಡಲೂ ಆಗದು ಎಂಬಂತೆ, ಆರ್ಥಿಕವಾಗಿ ಸಾಕಷ್ಟು ಹಿಂದುಳಿದಿದ್ದಾರೆ. ಅವರ ಬದುಕು ಚಿಂತಾಜನಕವಾಗಿದೆ. ಒಂದೆಡೆ, ಯಂತ್ರಗಳಿಂದ ಸಿದ್ಧಗೊಂಡ ಉಡುಪುಗಳು ಗ್ರಾಹಕರನ್ನು ಆಕರ್ಷಿಸುತ್ತ, ಕೈಮಗ್ಗ ನೇಕಾರಿಕೆ ಪ್ರಾಮುಖ್ಯತೆ ಕಳೆದುಕೊಳ್ಳುತ್ತಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ, ಗಾಯದ ಮೇಲೆ ಬರೆ ಎಳೆದಂತೆ ಸರ್ಕಾರದಿಂದ ಲಭ್ಯವಾಗುತ್ತಿದ್ದ ಪ್ರೋತ್ಸಾಹ ಧನವೂ ನಿಂತಿರುವುದು ನೇಕಾರರ ಆಕ್ರೋಶಕ್ಕೆ ಕಾರಣವಾಗಿದೆ. ನಿಲ್ಲಿಸಿರುವ ಪ್ರೋತ್ಸಾಹಧನ ಪುನರಾರಂಭಿಸಬೇಕು ಎಂದು ಗದಗ ಜಿಲ್ಲೆಯ ನೇಕಾರರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಅನಾದಿ ಕಾಲದಿಂದಲೂ ಜಿಲ್ಲೆಯಲ್ಲಿ ನೇಕಾರಿಕೆಯನ್ನೇ ವೃತ್ತಿಯಾಗಿಸಿಕೊಂಡು ಅದೆಷ್ಟೋ ಕುಟುಂಬಗಳು ಜೀವನ ನಡೆಸುತ್ತಿವೆ.




ಸರ್ಕಾರ ಕೂಡಾ ನೇಕಾರಿಕೆ ಮಾಡಲು ಸಾಕಷ್ಟು ಉತ್ತೇಜನ ನೀಡುತ್ತ ಬಂದಿತ್ತು. ಆದರೀಗ, ನೇಕಾರರಿಗೆ ನೀಡುತ್ತಿದ್ದ ಪ್ರೋತ್ಸಾಹಧನ ವಿತರಣೆ ನಿಲ್ಲಿಸಿರುವುದು ನೇಕಾರರ ಆಕ್ರೋಶಕ್ಕೆ ಕಾರಣವಾಗಿದೆ. ಗದಗ–ಬೆಟಗೇರಿ, ನರಸಾಪುರದಲ್ಲಿ 400ಕ್ಕೂ ಹೆಚ್ಚು ಕುಟುಂಬಗಳು ನೇಕಾರಿಕೆಯನ್ನೇ ನೆಚ್ಚಿಕೊಂಡು ಜೀವನ ನಡೆಸುತ್ತಿವೆ. ಕುಟುಂಬದ ಎಲ್ಲ ಸದಸ್ಯರು ನೇಕಾರಿಕೆ ಮಾಡಿಕೊಂಡು ಜೀವನ ನಿರ್ವಹಣೆ ಮಾಡುತ್ತಿದ್ದಾರೆ. ಕಾಟನ್, ಪಾಲಿಸ್ಟರ್ ಬಟ್ಟೆ ನೇಯುವ ಕೈಮಗ್ಗ ನೇಕಾರರಿಗೆ 100 ರೂಪಾಯಿ ಕೂಲಿ ಜೊತೆಗೆ, 15ರಿಂದ 30 ರೂ. ಪ್ರೋತ್ಸಾಹಧನ ನೀಡಲಾಗುತ್ತಿತ್ತು. ಇದರಿಂದಲೇ ಬದುಕು ನಡೆಯದಿದ್ದರೂ, ನೇಕಾರರ ಬದುಕಿಗೆ ಆಸರೆಯಂತೂ ಆಗಿತ್ತು.

ಆದರೆ, 2013ರಿಂದ 2017ರವರೆಗೆ ಮಾತ್ರ ಪ್ರೋತ್ಸಾಹ ಧನ ನೀಡಿ, ನಂತರ ಪ್ರೋತ್ಸಾಹಧನ ನಿಲ್ಲಿಸಲಾಗಿದೆ. ತಲೆತಲಾಂತರದಿಂದ ಮುಂದುವರೆಸಿಕೊಂಡು ಬಂದಿದ್ದ ಮೂಲ ಕಸುಬನ್ನು ಬಿಟ್ಟು ಪರ್ಯಾಯ ಕೆಲಸ ಹುಡುಕುವ ಸ್ಥಿತಿ ನಿರ್ಮಾಣವಾಗಿದೆ. ನೇಕಾರಿಕೆಯನ್ನು ಮಾತ್ರ ನಂಬಿದ ನೇಕಾರರ ಸ್ಥಿತಿ ಮಾತ್ರ ಅಯೋಮಯವಾಗಿದೆ. ಹೀಗಾಗಿ ಪ್ರೋತ್ಸಾಹಧನವನ್ನು ಪುನಃ ಪ್ರಾರಂಭಿಸಬೇಕೆಂದು ಸರ್ಕಾರ ಹಾಗೂ ಕೆಎಚ್‌ಡಿಸಿ ಸಂಸ್ಥೆಯನ್ನು ಒತ್ತಾಯಿಸಿದ್ದಾರೆ.

ಶಾಲಾ ಮಕ್ಕಳಿಗೆ ಸಮವಸ್ತ್ರ ನೀಡುವ ಉದ್ದೇಶದಿಂದ ಕೈಮಗ್ಗ ನೇಕಾರರಿಗೆ ಪ್ರೋತ್ಸಾಹಧನ ವಿತರಿಸುವ ಮೂಲಕ ಉತ್ತೇಜನ ನೀಡಲಾಗಿತ್ತು. ಈಗ ಸರ್ಕಾರ ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನೇಕಾರರನ್ನು ನಡು ನೀರಿನಲ್ಲಿ ಕೈಬಿಟ್ಟಂತಾಗಿದೆ.

> 2017ರ ಮಾರ್ಚ್‌ವರೆಗೆ ಪ್ರೋತ್ಸಾಹಧನ ನೀಡಲಾಗಿದೆ. ನಂತರ, ಸರ್ಕಾರದಿಂದ ಹಣ ಬಿಡುಗಡೆಯಾಗಿಲ್ಲ. ಸರ್ಕಾರ ಹಾಗೂ ನಿಗಮದಿಂದ ಪ್ರೋತ್ಸಾಹ ಧನ ನೀಡಲಾಗುತ್ತಿತ್ತು. ಶಾಲಾ ಮಕ್ಕಳಿಗೆ ನೀಡುವ ಸಮವಸ್ತ್ರದ ಬಟ್ಟೆ ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದನೆ ಆಗಬೇಕೆಂಬ ಉದ್ದೇಶದಿಂದ ವಿದ್ಯಾ ವಿಕಾಸ್ ಯೋಜನೆಯಡಿ ಉತ್ತೇಜನ ನೀಡಲಾಗುತ್ತಿತ್ತು. ಈಗ ಅದೇ ಹಣವನ್ನು ಬೇರೆ ಕಾರ್ಯಗಳಿಗೆ ಉಪಯೋಗ ಮಾಡಲಾಗುತ್ತಿದೆ. ಈ ಹಿಂದೆ ಮೂರು ಕೋಟಿ ರೂಪಾಯಿ ಪ್ಯಾಕೇಜ್ ನೀಡಲಾಗುತ್ತಿತ್ತು. ನಿಗಮಕ್ಕೆ ನೀಡುವ ಪ್ಯಾಕೆಜ್ ಮೊತ್ತ ಬಾರದ ಹಿನ್ನೆಲೆಯಲ್ಲಿ ಇನ್ಸೆಂಟಿವ್ ಕೊಟ್ಟಿಲ್ಲ. ಸರ್ಕಾರಕ್ಕೆ ಹೆಚ್ಚಿನ ಹಣ ಒದಗಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ.
>
> **– ಜಯಪ್ರಕಾಶ್ ಗೆಣಕಿಹಾಳ.**
> ಕೈಮಗ್ಗ ನಿಮಗದ ಯೋಜನಾಧಿಕಾರಿ.





### ರೋಹಿಣಿ ಮಳೆಗೆ ಕಾಲಕಾಲೇಶ್ವರ ಬೆಟ್ಟದಲ್ಲಿ ಕಿರು ಜಲಪಾತ ಸೃಷ್ಟಿ


# ಜಲಧಾರೆಯ ರಮ್ಯ ಸೊಬಗು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಳೆಗಾಲದ ವರ್ಷ ವೈಭವಕ್ಕೊಂದು ಗರಿ ಎಂಬಂತೆ ಪಟ್ಟಣದ ಗುಡ್ಡ ಸೇರಿದಂತೆ ಸುತ್ತಲಿನ ಗ್ರಾಮಗಳ ಬೆಟ್ಟಗಳಲ್ಲಿ ಸೃಷ್ಟಿಯಾಗಿರುವ ಅನೇಕ ಕಿರು ಜಲಪಾತಗಳು ಕಂಗೊಳಿಸುತ್ತ ಜನರನ್ನು ಚಿತ್ತಾಕರ್ಷಿಸುತ್ತಿವೆ.

ತಾಲೂಕಿನಲ್ಲಿ ರೋಹಿಣಿ ಮಳೆಯಿಂದಾಗಿ ಬೆಟ್ಟ–ಗುಡ್ಡಗಳಲ್ಲಿ ಕಿರು ಜಲಪಾತಗಳು ಸೃಷ್ಟಿಯಾಗಿ ಮೈದುಂಬಿ ಹರಿಯುತ್ತಿವೆ. ಗಜೇಂದ್ರಗಡ ತಾಲೂಕಿನ ದಕ್ಷಿಣ ಕಾಶಿ ಕಾಲಕಾಲೇಶ್ವರ ಬೆಟ್ಟದಲ್ಲಿ ಅಂತರ ಗಂಗೆ ಹಾಗೂ ಸುತ್ತಲಿನ ಬೆಟ್ಟದಲ್ಲಿ ಕಿರು ಜಲಪಾತಗಳು ಸೃಷ್ಟಿಯಾಗಿ ಪರಿಸರ ಸೌಂದರ್ಯ ಹೆಚ್ಚಿಸುತ್ತಿದ್ದು, ಸೃಷ್ಟಿಕರ್ತನೂ ಒಮ್ಮೆ ಬೆರಗಾಗುವಂತಹ ಅನುಭವ. ಕಣ್ಣು ಹಾಯಿಸಿದಲ್ಲೆಲ್ಲಾ ಹಚ್ಚ ಹಸುರಿನ ರಮಣೀಯ ದೃಶ್ಯ. ಊಹೆಗೂ ನಿಲುಕದ ಚಿತ್ತಾರ, ಗುಡ್ಡದ ಸಾಲಿನಿಂದ ಮೈ ತುಂಬಿ ಹರಿಯುವ, ವಯ್ಯಾರದಿಂದ ಧರೆಗೆ ಹಾಲಿನ ಕಡಲಿನಂತೆ ಧುಮುಕುತ್ತಿರುವ ಕಿರು ಜಲಪಾತಗಳು ನೋಡುವ ಕಣ್ಣಿಗೆ ರಸದೌತಣ ನೀಡುತ್ತಿವೆ.

ವಿಶಾಲ ಹೃದಯದ ಪ್ರತೀಕದಂತಿರುವ ಇಲ್ಲಿನ ಬೆಟ್ಟದ ಮೇಲೆ ಹಾಗೂ ಕಣವಿ ವೀರಭದ್ರೇಶ್ವರ ಮಂದಿರದ ಎದುರಿನ ರಸ್ತೆ, ಎಡಗಡೆ ಗುಡ್ಡದ ಅಂಚಿನಿಂದ ನೈಜ ಸೌಂದರ್ಯವನ್ನು ಸವಿಯುತ್ತ ಒಂದು ಕೀ.ಮೀ. ವರೆಗೂ 'ನನ್ನನ್ನು ನೋಡಲು ಬನ್ನಿ' ಎಂದು ಕೈ ಬೀಸಿ ಕರೆಯುತ್ತಿರುವಂತಿದೆ. ಅಸಂಖ್ಯಾತ ಭಕ್ತರ ಆರಾಧ್ಯದೈವ ದಕ್ಷಿಣಕಾಶಿ ಪ್ರಸಿದ್ಧಿಯ ಕಾಲಕಾಲೇಶ್ವರ ದೇವಸ್ಥಾನದ ಅಂತರಗಂಗೆ ಇಡೀ ನಾಡಿಗೆ ಚಿರಪರಿಚಿತ. ಆದರೆ ಅದಕ್ಕೆ ಹೊಂದಿರುವ ಬೆಟ್ಟಗಳಲ್ಲಿ ಮಳೆಯಾದಾಗ ತಾತ್ಕಾಲಿಕಾಗಿ ಉದ್ಭವವಾಗುವ ಸಣ್ಣ–ಸಣ್ಣ ಜಲಪಾತಗಳು ಹೆಚ್ಚಿನ ಪ್ರಚಾರ ದೊರೆಯದೆ ನಾಡಿಗೆ ಅಪರಿಚಿತವಾಗಿಯೇ ಉಳಿದುಕೊಂಡಿವೆ. ಗುಡ್ಡದ ಅಂಚಿನಿಂದ, ಪ್ರಕೃತಿ ಮಾತೆಯ ಬೆಟ್ಟದ ಕಲ್ಲು ಬಂಡೆಗಳ ಮಧ್ಯದಲ್ಲಿ ಅಬ್ಬರದೊಂದಿಗೆ ನುಸುಳುವ ಜಲ ಧಾರೆಯು, ವೈಯ್ಯಾರದಿಂದ ಧುಮುಕುವ ತಿಳಿ ಹಸಿರು–ನೀಲಿ ಬಣ್ಣದ ಜಲ ವೈಭವದ ನಯನಮನೋಹರ ಸೊಬಗನ್ನು ಪರಿಸರ ಪ್ರಿಯರು ಆಸ್ವಾದಿಸುತ್ತಿದ್ದಾರೆ.



> ಬೆಟ್ಟಗಳ ನೂರಾರು ಅಡಿ ಎತ್ತರದಿಂದ ಹಾಲಿನ ಧಾರೆ ಚೆಲ್ಲಿದಂತೆ ಗೋಚರಿಸುವ ಈ ಜಲಸಿರಿಯ ವೈಭವ ಕಂಡ ಜನತೆ ಅಲ್ಲಿಯೇ ಮೈಮರೆತು ಹರ್ಷ ವ್ಯಕ್ತಪಡಿಸುತ್ತಿದ್ದಾರೆ. ಇದರ ದರ್ಶನವು ಕಂಗಳಿಗೆ ಹೊಸ ಹಬ್ಬವಾದರೆ, ಜಲಪಾತದ ಸಪ್ಪಳದೊಂದಿಗೆ ಪಕ್ಷಿಗಳ ಕಲರವ ಕರ್ಣಾನಂದವಾಗಿದೆ. ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಗುಡ್ಡಗಳ ಮೇಲೆ ಜಲ ವೈಭವ ಪ್ರಾರಂಭವಾಗಿದೆ. ಇದನ್ನು ನೋಡಲು ಜನರು ತಂಡೋಪತಂಡವಾಗಿ ಕಾಲಕಾಲೇಶ್ವರದತ್ತ ಹೆಜ್ಜೆ ಹಾಕುತ್ತಿದ್ದಾರೆ.

### ಬಸವರಾಜ ಎಮ್.ಯರಗುಪ್ಪಿ ಅವರಿಗೆ

# ರಾಜ್ಯ ಮಟ್ಟದ 'ಸೇವಾ ರತ್ನ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಇಲಾಖೆಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಸವರಾಜ ಎಂ.ಯರಗುಪ್ಪಿಯವರು ಕಪ್ಪತ್ತಗಿರಿ ಸಾಹಿತ್ಯ, ಸಾಂಸ್ಕೃತಿಕ ಕಲಾ ವೇದಿಕೆ ರಾಜ್ಯ ಘಟಕ ಗದಗ–ಕಳಸಾಪೂರ ಅವರ ವತಿಯಿಂದ ಕೊಡ ಮಾಡುವ 2023–24ನೇ ಸಾಲಿನ ಶಿಕ್ಷಣ ಕ್ಷೇತ್ರದ ವಿಶೇಷ ವ್ಯಕ್ತಿಗಳ ವಿಭಾಗದಲ್ಲಿ ರಾಜ್ಯ ಮಟ್ಟದ 'ಸೇವಾ ರತ್ನ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಪ್ರಸ್ತುತ ಶಿರಹಟ್ಟಿ ಬಿಆರ್‌ಸಿ ಕೇಂದ್ರದ ಸಂಪನ್ಮೂಲ ವ್ಯಕ್ತಿಯಾಗಿ, ಮಕ್ಕಳ ಮತ್ತು ಸಮುದಾಯದ ಒಡನಾಡಿಗಳಾಗಿ, ತಾಲ್ಲೂಕು ಅಷ್ಟೇ ಅಲ್ಲದೆ ಜಿಲ್ಲೆ ಹಾಗೂ ರಾಜ್ಯದಾದ್ಯಂತ ವರ್ಷವಿಡೀ ಪ್ರತಿದಿನದ ವಿಶೇಷ ಸಂಗತಿಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಆ ದಿನದ ಮಹತ್ವವನ್ನು ತಿಳಿಸಿಕೊಡುವ ಮೂಲಕ ಸಕ್ರಿಯರಾಗಿದ್ದಾರೆ. ಈ ಮೂಲಕ ಅವರು ಸಮಾಜದ ಓದುವ ಮತ್ತು ಉದ್ಯೋಗ ಅರಸುತ್ತಿರುವ ಯುವಕರಿಗೆ ಅವಶ್ಯಕ ಮಾಹಿತಿ ನೀಡುತ್ತಿರುವದು ಶ್ಲಾಘನೀಯ.



ಈ ಎಲ್ಲಾ ಸೇವಾ ಕಾರ್ಯಗಳನ್ನು ಪರಿಗಣಿಸಿ ಶಿಕ್ಷಣ ಕ್ಷೇತ್ರದ ವಿಶೇಷ ವ್ಯಕ್ತಿಗಳ ವಿಭಾಗದಲ್ಲಿ ರಾಜ್ಯ ಮಟ್ಟದ 'ಸೇವಾ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕಪ್ಪತ್ತಗಿರಿ ಫೌಂಡೇಶನ್ ಸಂಚಾಲಕರು ತಿಳಿಸಿದ್ದಾರೆ.

ಸುಕ್ಷೇತ್ರ ಕಪ್ಪತಗುಡ್ಡ, ಕಪ್ಪಮಲ್ಲೇಶ್ವರ ದೈವಿವನ ಕಡಕೋಳ ಅರಣ್ಯ ವಲಯದಲ್ಲಿ ನಡೆಯುವ ಪರಿಸರೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಮಾಡಿ ಸನ್ಮಾನಿಸಲಾಗುತ್ತದೆ. ಬಸವರಾಜ ಯರಗುಪ್ಪಿ ಅವರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಸವರಾಜ ಹರಲಾಪುರ, ಚಂದ್ರಕಾಂತ ನೇಕಾರ, ಡಿ.ಡಿ. ಲಮಾಣಿ, ಬಸವರಾಜ ಯತ್ನಳ್ಳಿ, ಎಲ್.ಎನ್. ನಂದೆಣ್ಣವರ, ಗೀತಾ ಹಳ್ಯಾಳ, ಎಂ.ಎಸ್. ಹಿರೇಮಠ, ಡಿ.ಎಲ್. ಪಾಟೀಲ್, ಐ.ಎ. ನೀರಲಗಿ ಪಾಟೀಲ್ ಮುಂತಾದವರು ಅಭಿನಂದಿಸಿದ್ದಾರೆ.



ಹರಪನಹಳ್ಳಿ ತಾಲೂಕಿನ ನಂದಿಬೇವೂರು ಗ್ರಾಮದಲ್ಲಿ ಪ್ರತೀ ವರ್ಷದಂತೆ ಮಳೆ–ಬೆಳೆ ಸಮೃದ್ಧಿಯಾಗಿ, ಯಾವುದೇ ರೋಗ ಬಾಧೆಗಳು ಕಾಡದಂತೆ ಅಮ್ಮನನ್ನು ಗ್ರಾಮದ ಗಡಿಯಾಚೆಗೆ ಕಳಿಸಲಾಯಿತು. ಗ್ರಾಮದ ಪ್ರತಿ ಮನೆಯಲ್ಲೂ ವಿಶೇಷ ನೈವೇದ್ಯ ಮಾಡಿಕೊಂಡು, ಬೇವಿನ ಸೊಪ್ಪು ಹಾಗೂ ಬಾಳೆ ಹಣ್ಣುಗಳನ್ನು ಕುಂಡದಲ್ಲಿ ಹಾಕಿ, ಗ್ರಾಮಸ್ಥರು ಗ್ರಾಮದ ಗಡಿಯಾಚೆ ತೆರಳಿ, ಒಂದು ಮರದ ಕೆಳಗೆ ನೈವೇದ್ಯವನ್ನು ಇಟ್ಟು ಕೈ ಮುಗಿದು, ಮರಳಿ ನೋಡದಂತೆ ಹಿಂದಿರುಗುತ್ತಾರೆ.

## ಸಂಪಾದಕೀಯ

# ಸಂವಿಧಾನದ ಮಹತ್ವ ಅರಿತ ಪ್ರಧಾನಿ ನರೇಂದ್ರ ಮೋದಿ

ನರೇಂದ್ರ ಮೋದಿ 3ನೇ ಅವಧಿಗೆ ಪ್ರಧಾನಿಯಾಗುವುದು ನಿಶ್ಚಿತವಾಗಿದೆ. ಜೂನ್ 9ರಂದು ಮೋದಿ ರಾಷ್ಟ್ರಪತಿ ಭವನದಲ್ಲಿ ಪ್ರಮಾಣವಚನ ಸ್ವೀಕರಿಸುವ ಸಮಾರಂಭಕ್ಕೆ ಮುಹೂರ್ತವು ನಿಗದಿಯಾಗಿದೆ. ಮೋದಿ ಜೊತೆಗೆ ಹಲವರು ಸಂಪುಟಕ್ಕೆ ಸೇರ್ಪಡೆಯಾಗಿ ಅವರು ಸಹ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಗಳಿವೆ.

ಆದರೆ ಯಾರಿಗೆ ಯಾವ ಖಾತೆ ಎನ್ನುವ ಗುಟ್ಟು ರಟ್ಟಾಗಿಲ್ಲ. ಕರ್ನಾಟಕದ ಸಂಸತ್ ಸದಸ್ಯರ ಬಗ್ಗೆ ಹೇಳುವುದಾದರೆ ಎಚ್ ಡಿ ಕುಮಾರಸ್ವಾಮಿ ಮತ್ತು ಪ್ರಲ್ಹಾದ ಜೋಶಿ ಸಂಪುಟಕ್ಕೆ ಸೇರ್ಪಡೆಯಾಗುವ ಸಾಧ್ಯತೆ ಇದೆ. ಇನ್ನು ನಿತೀಶ್ ಕುಮಾರ್ ಹಾಗೂ ಚಂದ್ರಬಾಬು ನಾಯ್ಡು ಪಕ್ಷದ ಸದಸ್ಯರು ಅತಿಹೆಚ್ಚಿನ ಸಂಖ್ಯೆಯಲ್ಲಿ ಕೇಂದ್ರ ಸಂಪುಟವನ್ನು ಸೇರಲಿದ್ದಾರೆ.

ಈ ಪ್ರಮಾಣವಚನ ಸ್ವೀಕರಿಸುವುದಕ್ಕೂ ಮುನ್ನವೇ ಪ್ರಧಾನಿ ನರೇಂದ್ರ ಮೋದಿ, ಸಂವಿಧಾನದ ಪ್ರತಿಯನ್ನ ಹಣೆಗೆ ಒತ್ತಿಕೊಂಡು ನಮಸ್ಕರಿಸಿದ್ದು ವಿಶೇಷವಾಗಿತ್ತು. ಮೊದಲ ಬಾರಿಗೆ ಸಂಸತ್ ಪ್ರವೇಶಿಸುವ ಸಂದರ್ಭದಲ್ಲಿ ಸಂಸತ್ ಭವನಕ್ಕೆ ನಮಸ್ಕರಿಸಿ ಪ್ರಮಾಣವಚನ ಸ್ವೀಕರಿಸಿದ್ದರು. ಈಗ ಸಂವಿಧಾನದ ಪ್ರತಿಗೆ ನಮಸ್ಕರಿಸಿ ಮೂರನೇ ಅವಧಿಗೆ ಪ್ರಧಾನಿಯಾಗುತ್ತಿದ್ದಾರೆ.

ಪ್ರಧಾನಿಯ ಈ ನಡೆಯಿಂದ ದೇಶದಲ್ಲಿ ಸಾಕಷ್ಟು ಚರ್ಚೆಯಾಗುತ್ತಿದೆ. ಬಿಜೆಪಿಯ ಕೆಲ ಸದಸ್ಯರು ಸಂವಿಧಾನದ ಪ್ರತಿಯನ್ನ ಹರಿದು ಹಾಕಿದಾಗ, ಬೆಂಕಿ ಹಚ್ಚುವ ಬೆದರಿಕೆ ಹಾಕಿದಾಗ, ಸಂವಿಧಾನವನ್ನೇ ಬದಲಾಯಿಸುತ್ತೇವೆ ಎಂದು ಅಹಮ್ಮಿನ ಮಾತನಾಡಿದಾಗ ನರೇಂದ್ರ ಮೋದಿ ಮೌನವಾಗಿದ್ದರು. ಆದರೆ ಚುನಾವಣೆ ಸಮೀಪಿಸುತ್ತಿದ್ದಂತೆ ತಮ್ಮ ವರಸೆ ಬದಲಿಸಿದ ಮೋದಿ, ಯಾವುದೇ ಕಾರಣಕ್ಕೂ ಸಂವಿಧಾನ ಬದಲಾಯಿಸುವುದಿಲ್ಲ ಎಂದು ಘೋಷಣೆ ಮಾಡಿದರು.

ಆದರೆ ಅದಕ್ಕೂ ಮುನ್ನ ಸಂವಿಧಾನ ಎಷ್ಟೆಲ್ಲಾ ಅಪಾಯಗಳನ್ನು ಎದುರಿಸಿತು, ಯಾರಲ್ಲ ಸಂವಿಧಾನಕ್ಕೆ ಅಪಚಾರ ಮಾಡಿದರು ಅವರ ಬಗ್ಗೆ ಚಕಾರ ಶಬ್ದ ಎತ್ತಲಿಲ್ಲ. ಸಂವಿಧಾನಕ್ಕೆ ಅಗೌರವ ತೋರಿದ್ದರ ಪರಿಣಾಮವನ್ನು ಈ ಚುನಾವಣೆಯಲ್ಲಿ ಜನ ಕೊಟ್ಟಿದ್ದಾರೆ.

ಆ ಕಾರಣಕ್ಕಾಗಿ ಇವತ್ತು ಸಂವಿಧಾನದ ಪ್ರತಿಗೆ ನಮನ ಸಲ್ಲಿಸುವಂತಹ ಅನಿವಾರ್ಯತೆ ಬಂದಿದೆ. ಸಂವಿಧಾನ ಇಡೀ ದೇಶದ ಜನ ಒಪ್ಪಿಕೊಂಡು ಸ್ವೀಕರಿಸಿದ್ದಾರೆ. ಅಂತಹ ಸಂವಿಧಾನ ಬದಲಾವಣೆ, ಅಪಚಾರ ಮಾಡುವವರಿಗೆ ದೇಶದ ಜನ ಸುಮ್ಮನೆ ಬಿಡುವುದಿಲ್ಲ ಎನ್ನುವುದು ಪ್ರಸಕ್ತ ಲೋಕಸಭಾ ಚುನಾವಣೆಯಿಂದ ಸ್ಪಷ್ಟವಾಗಿದೆ. ಇನ್ನಾದರೂ ಸಂವಿಧಾನ ರಕ್ಷಣೆಯ ಕೆಲಸವಾಗಲಿ.

## ಮಹಾರಾಣಾ ಪ್ರತಾಪಸಿಂಹರ 484ನೇ ಜಯಂತಿ ನಿಮಿತ್ತ ಲೇಖನ

# ಪ್ರಜೆಗಳ ರಾಜ ಮಹಾರಾಣಾ ಪ್ರತಾಪಸಿಂಹ



ಸನತಾನ ಭಾರತದ ಇತಿಹಾಸದಲ್ಲಿ ರಜಪೂತರಿಗೆ ವಿಶೇಷವಾದ ಸ್ಥಾನ. ಯುದ್ಧ ಭೂಮಿಯಲ್ಲಿ ರಜಪೂತ ವೀರರು ತೋರಿಸಿದ ಅಪ್ರತಿಮ ಧೈರ್ಯ, ತ್ಯಾಗ, ಬಲಿದಾನದ ದಂತ ಕಥೆಗಳಿಗೆ ಕೊನೆ ಮೊದಲಿಲ್ಲ. ರಾಜಸ್ಥಾನದ ಮರಭೂಮಿಯ ಕಣ-ಕಣಗಳು, ಅರಾವಲಿ ಬೆಟ್ಟ-ಗುಡ್ಡಗಳ ಸಾಲು, ಇಲ್ಲಿನ ಕೋಟೆ ಕೊತ್ತಲಗಳು ರಜಪೂತರ ಅಪ್ರತಿಮ ಧೈರ್ಯದ ಕಥೆಗಳನ್ನು ಸಾರಿ ಹೇಳುತ್ತಲಿವೆ. ಇಲ್ಲಿನ ನದಿ, ಹಳ್ಳ-ಕೊಳ್ಳಗಳಲ್ಲಿ ರಜಪೂತರ ಪರಾಕ್ರಮ, ಶೌರ್ಯ ಪ್ರತಿಧ್ವನಿಗೊಳ್ಳುತ್ತಲಿದೆ. ಇಲ್ಲಿ ಸಣ್ಣಪುಟ್ಟ ರಾಜ್ಯಗಳು-ರಾಜರು, ದೊರೆಗಳು, ರಾಣಾಗಳಿಗೆ ಕೊರತೆ ಇಲ್ಲ. ಇದರಲ್ಲಿ ಮೇವಾಡ ರಾಜ್ಯಕ್ಕೆ ಕಳಶಪ್ರಾಯ ಸ್ಥಾನ. ಮಹಾರಾಣಾ ಪ್ರತಾಪಸಿಂಹ ಎಂದರೆ ಭಾರತದ ಕ್ಷಾತ್ರತೇಜದ, ಪರಾಕ್ರಮದ ಒಟ್ಟುಗೂಡಿದ ವ್ಯಕ್ತಿ, ಶಕ್ತಿ ಎಂದರೆ ಅತಿಶಯೋಕ್ತಿ ಅಲ್ಲ. ರಾಣಾ ಉದಯಸಿಂಗ ಹಾಗೂ ಜೈವಂತಾಬಾಯಿ ಇವರ ಜೇಷ್ಠ ಪುತ್ರನಾಗಿ ಪ್ರತಾಪಸಿಂಹ ಕುಂಭಲಗಡದಲ್ಲಿ 1540ರ ಮೇ 9 (ಜೇಷ್ಠ ಶುದ್ಧ ತೃತೀಯಾ ರವಿವಾರ ದಿ.13)ರಂದು ಜನಿಸಿ, ರಜಪೂತರ ಹೆಮ್ಮೆ ಹಾಗೂ ಆತ್ಮಗೌರವದ ಪ್ರತೀಕನಾದ.

1568ರಲ್ಲಿ ರಾಣಾ ಉದಯಸಿಂಗ ಮೇವಾಡದ ರಾಜ್ಯಭಾರ ಮಾಡುತ್ತಿದ್ದಾಗ ಒಂದು ವಿಷಮ ಪರಿಸ್ಥಿತಿಯಲ್ಲಿ ಪ್ರತಾಪಸಿಂಹ ಗೋಗುಂದಾದಲ್ಲಿ ರಾಜಮುಕಟ ಧರಿಸಿದ. 'ಸ್ವಾತಂತ್ರ್ಯ ಸುಖ ಸ್ವರ್ಗ ಸುಖಕ್ಕಿಂತ ಮಿಗಿಲು' ಎಂದು ಪ್ರಕಟಿಸಿದ. 'ಎಲ್ಲಿಯವರೆಗೆ ಮೇವಾಡ ಪೂರ್ಣ ಸ್ವತಂತ್ರವಾಗುವುದಿಲ್ಲವೋ, ಚಿತ್ತೋಡ ವಶಪಡಿಸಿಕೊಳ್ಳುವದಿಲ್ಲವೋ ಅಲ್ಲಿಯವರೆಗೆ ರಾಜವೈಭವ ಅನುಭವಿಸುವದಿಲ್ಲ' ಎಂದು ಪ್ರತಿಜ್ಞೆ ಮಾಡಿದ.

ವಾಸ್ತವದಲ್ಲಿ ಮಹಾರಾಣಾ ತಮ್ಮ ಮನದ ಮಾತು ಹೇಳದೇ ರಾಜ್ಯದ ಜನರ ಮನದ ಮಾತು ಹೇಳಿದ್ದರು. ದೊರೆ ತಾನೇ ಆಹ್ವಾನಿಸಿಕೊಂಡ ಕಠಿಣ ಜೀವನ ನೋಡಿ ಪ್ರಜೆಗಳ ಮನಸ್ಸು ಕರಗಿತು. ಅರಮನೆಯಲ್ಲಿರುವ ಅರಸನಿಗಾಗಿ ಅಲ್ಲ, ತಮ್ಮಂತೆಯೇ ಜೀವಿಸುವ ನಾಯಕನಿಗಾಗಿ ಜನರು ಎಲ್ಲವನ್ನು ತ್ಯಾಗ ಮಾಡಲು ಸಿದ್ಧರಾದರು. ಕಠಿಣದಲ್ಲಿ ಕಠಿಣ ಜೀವನ ನಡೆಸಲು ಮುಂದಾದರು. ವಿಲಾಸ, ಉತ್ಸವಗಳು ನಿಂತು ಹೋದವು. ಚಿತ್ತಾಕರ್ಷಕ ಒಡವೆ ಬದಲು ಶೋಕ ಚಿನ್ಹೆಗಳನ್ನು ಧರಿಸಲಾಯಿತು. ಮನೆ-ಮಠ ತೊರೆದು ಬೆಟ್ಟ-ಗುಡ್ಡಗಳಲ್ಲಿ ವಾಸಿಸಲು, ಸರಳ-ಸಾದಾ ಜೀವನ ನಡೆಸಲು ಜನ ಮುಂದಾದರು.

ಕಷ್ಟ-ನಷ್ಟ, ಏಳು-ಬೀಳುಗಳ ನಡುವೆಯೇ ಹೋರಾಟ ಮುಂದುವರೆಸಿದ ಪ್ರತಾಪಸಿಂಹರು ಮೇವಾಡದ ಬಹುಭಾಗವನ್ನು ನಂತರದಲ್ಲಿ ಗೆದ್ದರು. ಅದರ ಪುನರ್‌ನಿರ್ಮಾಣ ಮಾಡಿದರು. ಆದರೆ ಚಿತ್ತೋಡ ಮತ್ತು ಮಂಡಲಘಡ ಕೋಟೆಗಳನ್ನು ಗೆಲ್ಲಲಾಗಲಿಲ್ಲ. ಇದೇ ಅವರ ತೀವ್ರತರ ಅನಾರೋಗ್ಯಕ್ಕೆ ಕಾರಣವಾಯಿತು. ಪುತ್ರ ಅಮರಸಿಂಗನಿಂದ ಯುದ್ಧ ಮುಂದುವರೆಸಲು, ರಾಜವೈಭವ ತೊರೆಯಲು ಮಹಾರಾಣಾರು ಪ್ರತಿಜ್ಞೆ ಮಾಡಿಸಿದರು. ತಾವೇ ನಿರ್ಮಿಸಿದ ರಾಜಧಾನಿ ಜಾವುಂಡದಲ್ಲಿ 1597 ಜನೇವರಿ 29ರಂದು ಕೊನೆಯುಸಿರೆಳದರು. ಕೇವಲ 56 ವರ್ಷ ಬಾಳಿ-ಬದುಕಿ ಜನಸಾಮಾನ್ಯರ ಹೃದಯ ಸಾಮ್ರಾಟ ಆಗಿ ಮೆರೆದ ಮಹಾರಾಣಾ ಪ್ರತಾಪಸಿಂಹರು, 30 ವರ್ಷ ದೊರೆಗಳಾಗಿದ್ದರೂ, ಸುಖ, ವೈಭವ ತ್ಯಜಿಸಿ ಕಷ್ಟಗಳನ್ನು ಬಿಗಿದಪ್ಪಿದವರು. ಸ್ವಾತಂತ್ರ್ಯ, ಸಂಸ್ಕೃತಿ, ಪರಂಪರೆಯ ರಕ್ಷಕರಾಗಿ ನಿಂತವರು.

ಇಂದು ಅರಸೊತ್ತಿಗೆಯ ಕಾಲ ಇಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರೇ ಪ್ರಭುಗಳು. ಆದರೆ ಅವರಿಂದ ಆಯ್ಕೆಯಾದ ನಾಯಕರು ಮಾಡುತ್ತಿರುವುದೇನು? ಬಡತನ, ಸರಳ ಜೀವನ ಬಿಟ್ಟು ಪಂಚತಾರಾ ಸಂಸ್ಕೃತಿಯಲ್ಲಿದ್ದಾರೆ. ಇವರ ಬಂಗ್ಲೆಗಳು ಅರಮನೆಗಳ ವೈಭವವನ್ನು ನಾಚಿಸುತ್ತಿವೆ. ಇವರ ಆಡಂಬರದ ಜೀವನ ಜನಸಾಮಾನ್ಯರಲ್ಲಿ ಅಸೂಯೆ ಮೂಡಿಸುತ್ತಿದೆ. ಆಮಿಷಕ್ಕೆ ಒಳಗಾಗುವುದು, ಸ್ವಹಿತಕ್ಕೆ ಆದ್ಯತೆ ನೀಡುವುದು, ಮೋಸ-ವಂಚನೆ-ದ್ರೋಹ ಮಾಡಿದರೂ ಸೈ ಅಧಿಕಾರ ಬೇಕು ಎನ್ನುತ್ತಿರುವುದು, ಜೀವನ ಮೌಲ್ಯಗಳನ್ನು ಮರೆತು 'ಅಹಂ'ನಿಂದ ವರ್ತಿಸುತ್ತಿರುವುದನ್ನು ನೋಡಿದಾಗ ಮಹಾರಾಣಾ ಪ್ರತಾಪಸಿಂಹರು ನೆನಪಾಗಬೇಕು. ಅವರ ಮೌಲ್ಯಗಳು ಪ್ರೇರಣೆ ನೀಡಬೇಕು. ದೇಶಭಕ್ತ, ತ್ಯಾಗಮಯಿ ಜನಾಂಗ ರೂಪಗೊಳ್ಳುವಂತಾಗಲಿ ಎಂಬ ಭಾವನೆಗೆ ಬಲ ಸಿಗಬೇಕು. ಅದಕ್ಕಾಗಿಯೇ ಪ್ರತಾಪಸಿಂಹರ ಜಯಂತಿ ಒಂದು ನೆಪ ಮಾತ್ರ.

**- ಎಸ್.ಎ. ಜಮಾದಾರ.**
ಶಿಕ್ಷಕರು, ಬೆಟಗೇರಿ.

### ಸ್ವಾತಂತ್ರ್ಯ ನಂತರದಲ್ಲಿ....

* 1947ರಲ್ಲಿ ಭಾರತ ಸ್ವಾತಂತ್ರ್ಯ ಪಡೆದ ನಂತರ ಮಹಾರಾಣಾ ಭೂಪಾಲಸಿಂಗರು 1948 ಎಪ್ರಿಲ್ 18ರಂದು ಸ್ವತಂತ್ರ ಭಾರತದೊಂದಿಗೆ ತನ್ನ ರಾಜ್ಯವನ್ನು ವಿಲೀನ ಮಾಡಿದ ಮೊದಲ ದೊರೆ.
* ಪ್ರತಾಪಸಿಂಹ ಮತ್ತು ಚೇತಕ ಕುದುರೆಯ ಸ್ಮರಣಾರ್ಥ 1967, 1998ರಲ್ಲಿ ಅಂಚೆಚೀಟಿಗಳು ಮತ್ತು 2003ರಲ್ಲಿ ನಾಣ್ಯ ಬಿಡುಗಡೆ ಮಾಡಲಾಗಿದೆ.
* ಪ್ರತಾಪಸಿಂಹರ ಚೇತಕ ಕುದುರೆಯನ್ನೇರಿದ ಪ್ರತಿಮೆ ಸಂಸತ್ ಭವನದ ಮುಂದೆ 2007 ಅಗಸ್ಟ 21ರಂದು ಸ್ಥಾಪಿಸಲಾಗಿದೆ. ಇದರಲ್ಲಿ ಝಾಲಾ ಮಾನಸಿಂಗ, ಭಿಲ್ಲರ ರಾಜ ಭಾಮಾಸಿಂಗ, ಸೇನಾಪತಿ ಹಕೀಂ ಖಾನ ಸೂರ ಮತ್ತು ಕಾಲ್ದಳದ ಸೈನಿಕನ ಪ್ರತಿಮೆಗಳೂ ಪ್ರತಾಪಸಿಂಹರ ಪ್ರತಿಮೆ ಜೊತೆಗಿವೆ.
* ಉದಯಪುರದಲ್ಲಿ ಬೆಟ್ಟದ ಮೇಲೆ ಮಹಾರಾಣಾ ಪ್ರತಾಪರ ಭವ್ಯ ಸ್ಮಾರಕ ಮತ್ತು ಮ್ಯೂಸಿಯಂ ಸ್ಥಾಪಿಸಲಾಗಿದೆ.

## ಬಿಜೆಪಿ ಜೊತೆ ಅಧಿಕಾರಕ್ಕೇರಿದರೂ ಮುಸ್ಲಿಂ ವಿರೋಧಿ ನಿಲುವು ಬೆಂಬಲಿಸುವುದಿಲ್ಲ: ಜೆಡಿಯು ವಕ್ತಾರ ಕೆಸಿ ತ್ಯಾಗಿ



**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

"ಕೇಂದ್ರದಲ್ಲಿ ಅಧಿಕಾರಕ್ಕೆ ಬರಲಿರುವ ಎನ್‌ಡಿಎ ಮೈತ್ರಿ ಸರ್ಕಾರ ಮುಸ್ಲಿಮರು ಮತ್ತು ಇತರ ಅಲ್ಪಸಂಖ್ಯಾತ ಸಮುದಾಯಗಳ ವಿರುದ್ಧ ನಿಲುವು ತಾಳಲು ಜೆಡಿಯು ಅವಕಾಶ ನೀಡುವುದಿಲ್ಲ" ಎಂದು ಪಕ್ಷದ ರಾಷ್ಟ್ರೀಯ ವಕ್ತಾರ ಕೆಸಿ ತ್ಯಾಗಿ ಶುಕ್ರವಾರ ಡಿಜಿಟಲ್ ಸುದ್ದಿ ವಾಹಿನಿ ರೆಡ್ ಮೈಕ್‌ಗೆ ತಿಳಿಸಿದ್ದಾರೆ.

ಜೆಡಿಯು ಪಕ್ಷ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದ ಪ್ರಮುಖ ಪಕ್ಷವಾಗಿದೆ. ಮೋದಿ ನೇತೃತ್ವದ ಎನ್‌ಡಿಎ ಸಮ್ಮಿಶ್ರ ಸರ್ಕಾರ ರಚನೆಯಾಗಬೇಕಾದರೆ ಬಿಜೆಪಿಗೆ ಜೆಡಿಯು ಬೆಂಬಲ ಅತ್ಯಗತ್ಯವಾಗಿದೆ.

ನಾವು ಬಿಜೆಪಿಯೊಂದಿಗೆ ಅಧಿಕಾರಕ್ಕೇರಿದರೂ, ಮುಸ್ಲಿಮರು ಸೇರಿದಂತೆ ಇತರ ಅಲ್ಪಸಂಖ್ಯಾತರ ವಿರೋಧಿ ನಿಲುವನ್ನು ಒಪ್ಪುದಿಲ್ಲ" ಎಂದು ತ್ಯಾಗಿ ಹೇಳಿದ್ದು, "ಮುಸ್ಲಿಮರು ನಮ್ಮ ಪಕ್ಷದ ಮೇಲೆ ವಿಶ್ವಾಸ ಇಟ್ಟಿರುವುದರ ಬಗ್ಗೆ ಹೆಮ್ಮೆಪಡುತ್ತೇವೆ" ಎಂದಿದ್ದಾರೆ.

ಲೋಕಸಭೆ ಚುನಾವಣೆಯ ಪ್ರಚಾರದ ವೇಳೆ ಬಿಜೆಪಿ ಮುಸ್ಲಿಮರನ್ನು ಗುರಿಯಾಗಿಸಿ ದ್ವೇಷ ಭಾಷಣ ಮಾಡಿರುವುದನ್ನು ಉಲ್ಲೇಖಿಸಿ, "ಜೆಡಿಯು ಈ ಸರ್ಕಾರದಲ್ಲಿ ಜಾತ್ಯಾತೀತ ತತ್ವವನ್ನು ಎತ್ತಿ ಹಿಡಿಯಲಿದೆಯೇ? ಎಂಬ ಪ್ರಶ್ನೆಗೆ ಉತ್ತರಿಸಿದ ತ್ಯಾಗಿ, "ಚುನಾವಣೆಯಲ್ಲಿ ಕೆಸರೆರಚಲು ಬಳಸಿದ ವಿಷಯಗಳನ್ನು ಮರೆತುಬಿಡಬೇಕು" ಎಂದಿದ್ದಾರೆ.

ನಮ್ಮ ಪಕ್ಷದ ಅಭ್ಯರ್ಥಿ ಮುಜಾಹಿದ್ ಆಲಂ ಅವರು ಬಿಹಾರದ ಮುಸ್ಲಿಂ ಬಾಹುಳ್ಯದ ಕಿಶನ್‌ಗಂಜ್ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿ ಎರಡನೇ ಸ್ಥಾನ ಪಡೆದಿದ್ದಾರೆ. ಈ ಕ್ಷೇತ್ರದಲ್ಲಿ ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಪಕ್ಷದಿಂದ ಕಣಕ್ಕಿಳಿದಿದ್ದ ಅಭ್ಯರ್ಥಿಗಿಂತ ಹೆಚ್ಚು ಮತ ಗಳಿಸಿದ್ದಾರೆ" ಎಂದು ಕೆಸಿ ತ್ಯಾಗಿ ಹೇಳಿದ್ದು, ಮುಸ್ಲಿಮರು ಓವೈಸಿ ಪಕ್ಷಕ್ಕಿಂತ ಜೆಡಿಯು ಮೇಲೆ ವಿಶ್ವಾಸವಿಟ್ಟಿದ್ದಾರೆ ಎಂದು ತಿಳಿಸಿದ್ದಾರೆ. ಕಿಶನ್‌ಗಂಜ್‌ನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಹಮ್ಮದ್ ಜಾವೇದ್ ಗೆಲುವು ದಾಖಲಿಸಿದ್ದಾರೆ.

ಎಲ್ಲಾ ಜಾತಿ, ಧರ್ಮಗಳನ್ನು ಒಟ್ಟಿಗೆ ಮುನ್ನಡೆಸಲು ಭಯಸುತ್ತದೆ. ಜನರ ಮೇಲೆ ನೀತಿಗಳನ್ನು ಹೇರುವ ಮೊದಲು ಅವುಗಳ ಕುರಿತು ವಿಸ್ತೃತವಾದ ಚರ್ಚೆ ನಡೆಸಲು ನಮ್ಮ ಪಕ್ಷ ಸಲಹೆ ನೀಡುತ್ತದೆ" ಎಂದು ಕೆಸಿ ತ್ಯಾಗಿ ಹೇಳಿದ್ದಾರೆ.

## ಛತ್ತೀಸ್‌ಗಢ: ಗೋ ಸಾಗಾಟ ಮಾಡುತ್ತಿದ್ದ ಇಬ್ಬರನ್ನು ಥಳಿಸಿ ಹತ್ಯೆ

**■ವಿಜಯಸಾಕ್ಷಿ ಸುದ್ದಿ, ರಾಯ್‌ಪುರ**

ಛತ್ತೀಸ್‌ಗಢದ ರಾಯ್‌ಪುರ ಜಿಲ್ಲೆಯ ಬಳಿ ಗೋ ಕಳ್ಳಸಾಗಣೆ ಶಂಕೆಯಲ್ಲಿ ಗುಂಪೊಂದು ಇಬ್ಬರನ್ನು ಥಳಿಸಿ ಹತ್ಯೆ ಮಾಡಿದ್ದು, ಮತ್ತೋರ್ವ ತೀವ್ರವಾಗಿ ಗಾಯಗೊಂಡಿದ್ದಾರೆ.

ರಾಯ್‌ಪುರ ಜಿಲ್ಲೆಯ ಅರಂಗ್ ಪೊಲೀಸ್ ಠಾಣಾ ವ್ಯಾಪ್ತಿಯ ಮಹಾನದಿ ಸೇತುವೆ ಮೇಲೆ ಗುರುವಾರ ಬೆಳಗಿನ ಜಾವ 2.20ರ ಸುಮಾರಿಗೆ ಈ ಘಟನೆ ನಡೆದಿದೆ. ಮೃತರಿಬ್ಬರನ್ನು ಚಾಂದ್ ಮಿಯಾನ್ ಮತ್ತು ಗುಡ್ಡು ಖಾನ್ ಎಂದು ಗುರುತಿಸಲಾಗಿದೆ. ಥಳಿತದಿಂದ ಗಾಯಗೊಂಡಿರುವ ಸದ್ದಾಂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೂವರೂ ಉತ್ತರ ಪ್ರದೇಶದ ಸಹರಾನ್‌ಪುರ ಜಿಲ್ಲೆಯವರು ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರು ಸೇತುವೆಯಿಂದ ಜಿಗಿದಿದ್ದಾರೆಯೇ ಅಥವಾ ಅವರಿಗೆ ಥಳಿಸಲಾಗಿದೆಯೇ ಎಂಬುದು ಇನ್ನೂ ದೃಢಪಟ್ಟಿಲ್ಲವಾದ್ದರಿಂದ ವಿಷಯ ತನಿಖೆಯಲ್ಲಿದೆ. ಮೃತರು ಮಹಾಸಮುಂಡ್‌ನ ಹಳ್ಳಿಯಿಂದ ಎಮ್ಮೆಗಳನ್ನು ತೆಗೆದುಕೊಂಡು ಒಡಿಶಾದ ಮಾರುಕಟ್ಟೆಗೆ ಸಾಗಿಸುತ್ತಿದ್ದರು. ಈ ವೇಳೆ ತಮ್ಮನ್ನು ಹಿಂಬಾಲಿಸಲಾಗುತ್ತಿದೆ ಎಂದು ಅನುಮಾನಿಸಿ ತಮ್ಮ ವಾಹನವನ್ನು ರಾಯ್‌ಪುರದ ಕಡೆಗೆ ತಿರುಗಿಸಿದ್ದರು ಎಂದು ಅರಂಗ್ ಪೊಲೀಸ್ ಠಾಣೆಯ ಉಸ್ತುವಾರಿ ಶೈಲೇಂದ್ರ ಸಿಂಗ್ ಶ್ಯಾಮ್ ಹೇಳಿದ್ದಾರೆ. ಘಟನೆ ಬಗ್ಗೆ ಮಾಹಿತಿ ಪಡೆದ ತಕ್ಷಣ ಪೊಲೀಸರು ಕೂಡಲೇ ಸ್ಥಳಕ್ಕೆ ಧಾವಿಸಿ ಎರಡು ಶವಗಳನ್ನು ಸೇತುವೆಯಿಂದ ಹೊರತೆಗೆದಿದ್ದಾರೆ.

## ಕಾಂಗ್ರೆಸ್ ವಿವಿಪ್ಯಾಟ್ ಸುಧಾರಣೆ ನಿಲುವು ಹೊಂದಿದೆ ಹೊರತು ಇವಿಎಂಗಳನ್ನು ತಿರಸ್ಕರಿಸಿಲ್ಲ: ಪಿ ಚಿದಂಬರಂ ಸ್ಪಷ್ಟನೆ



**■ವಿಜಯಸಾಕ್ಷಿ ಸುದ್ದಿ, ಚೆನ್ನೈ**

ಕಾಂಗ್ರೆಸ್ ಪಕ್ಷವು ಎಲೆಕ್ಟ್ರಾನಿಕ್ ಮತಯಂತ್ರಗಳನ್ನು ಎಂದಿಗೂ ತಿರಸ್ಕರಿಸಿಲ್ಲ. ವಿವಿಪ್ಯಾಟ್ ಸುಧಾರಣೆಗಾಗಿ ಆಗ್ರಹಿಸಿತ್ತು ಎಂದು ಕಾಂಗ್ರೆಸ್ ಹಿರಿಯ ನಾಯಕ ಪಿ ಚಿದಂಬರಂ ಹೇಳಿದ್ದಾರೆ.

ಚೆನ್ನೈನಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿಇವಿಎಂಗಳ ಬಗ್ಗೆ ಪ್ರತಿಪಕ್ಷಗಳ ಮೌನದ ಬಗ್ಗೆ ಪ್ರಧಾನಿ ನರೇಂದ್ರ ಮೋದಿಯವರ ಹೇಳಿಕೆ ಕುರಿತ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಚಿದಂಬರಂ, 2024ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ನಾವು ಇವಿಎಂಗಳನ್ನು ತಿರಸ್ಕರಿಸಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

ದಯವಿಟ್ಟು ಪ್ರಣಾಳಿಕೆಯನ್ನು ಓದಿ, ನಾವು ಹೇಳುವುದೇನೆಂದರೆ, ವಿವಿಪಿಎಟಿ ಸ್ಲಿಪ್ ನಾವು ಓದುವ ಸಲುವಾಗಿ ಸುಮಾರು 4-5 ಸೆಕೆಂಡುಗಳ ಕಾಲ ಪ್ರದರ್ಶನಗೊಂಡು ಮತ್ತೆ ಸ್ಲಿಪ್ ಪೆಟ್ಟಿಗೆಯೊಳಗೆ ಬೀಳುತ್ತದೆ. ಗಿಗಿಕಂಖಿ ಬಾಕ್ಸ್‌ನಲ್ಲಿ ಸ್ವಯಂಚಾಲಿತವಾಗಿ ಸ್ಲಿಪ್ ಬೀಳುವ ಬದಲು, ಮತದಾರರು ಅದನ್ನು ಸ್ವೀಕರಿಸಿ, ಅದನ್ನು ನೋಡಿ ನಂತರ ಅದನ್ನು ಮತ್ತೆ ಪೆಟ್ಟಿಗೆಗೆ ಹಾಕಬೇಕು. ಈ ಸುಧಾರಣೆಯಿಂದ ಇವಿಎಂ-ವಿವಿಪ್ಯಾಟ್ ವ್ಯವಸ್ಥೆಯ ಬಗ್ಗೆ ಯಾವುದೇ ಅನುಮಾನ ಇರುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈಗಲೂ ಇವಿಎಂಗಳ ಬಗ್ಗೆ ಅಭಿಪ್ರಾಯ ಕೇಳಿದರೆ, ಹತ್ತರಲ್ಲಿ ನಾಲ್ವರು ಅಥವಾ ಹತ್ತರಲ್ಲಿ ಮೂವರು ಇವಿಎಂಗಳ ಬಗ್ಗೆ ಅನುಮಾನ ವ್ಯಕ್ತಪಡಿಸುತ್ತಾರೆ ಮತ್ತು ಈ ಅನುಮಾನ ನ್ಯಾಯೋಚಿತವೋ ಅಲ್ಲವೋ ಎಂದು ನಾನು ಹೇಳುತ್ತಿಲ್ಲ, ನನ್ನ ಮಟ್ಟಿಗೆ, ನಾನು ಎಂದಿಗೂ ಇವಿಎಂಗಳನ್ನು ದೂಷಿಸಿಲ್ಲ ಎಂದು ಹೇಳಿದ್ದಾರೆ.

ಇವಿಎಂ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸುವುದು ಕಾಂಗ್ರೆಸ್ ಪಕ್ಷದ ನಿಲುವು. ಪಕ್ಷದ ಕೆಲ ನಾಯಕರು ಇವಿಎಂ ವ್ಯವಸ್ಥೆಯನ್ನು ವಿರೋಧಿಸುತ್ತಿದ್ದಾರೆ ಎಂಬುದನ್ನು ನಾನು ಅಲ್ಲಗಳೆಯುವುದಿಲ್ಲ, ಆದರೆ ಅದು ಪಕ್ಷದ ನಿಲುವಲ್ಲ ಎಂದು ಚಿದಂಬರಂ ಹೇಳಿದ್ದಾರೆ.

ದೆಹಲಿಯಲ್ಲಿ ಹೊಸದಾಗಿ ಚುನಾಯಿತ ಸಂಸದರು ಮತ್ತು ಎನ್‌ಡಿಎ ನಾಯಕರನ್ನು ಉದ್ದೇಶಿಸಿ ಮಾತನಾಡಿದ್ದ ಮೋದಿ, ಚುನಾವಣಾ ವೇಳೆ ಇವಿಎಂಗಳು ಮತ್ತು ಚುನಾವಣಾ ಆಯೋಗದ ಮೇಲೆ ಅನುಮಾನಗಳನ್ನು ವ್ಯಕ್ತಪಡಿಸಿದ್ದಕ್ಕಾಗಿ ಪ್ರತಿಪಕ್ಷ ಇಂಡಿಯಾ ಮೈತ್ರಿಕೂಟದ ನಾಯಕರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಫಲಿತಾಂಶಗಳು ಅವರು ನಿರೀಕ್ಷಿಸಿದಂತೆ ಬರದಿದ್ದರೆ ಅವರು ದೇಶಾದ್ಯಂತ ಬೆಂಕಿ ಹಚ್ಚಲು ಬಯಸುತ್ತಿದ್ದಾರೆ. ಜೂನ್ 4ರ ಸಂಜೆಯ ವೇಳೆಗೆ ಇವಿಎಂಗಳು ಅವುಗಳನ್ನು ನಿಶ್ಯಬ್ದಗೊಳಿಸಿದ್ದವು ಎಂದು ಪ್ರತಿಪಕ್ಷಗಳ ನಿರೀಕ್ಷಿತ ಪ್ರದರ್ಶನಕ್ಕಿಂತ ಉತ್ತಮವಾದ ಪ್ರದರ್ಶನವನ್ನು ಸ್ಪಷ್ಟವಾಗಿ ಉಲ್ಲೇಖಿಸಿ ಪ್ರಧಾನಿ ಹೇಳಿದ್ದಾರೆ.

## ಲೋಕಸಭೆ ಫಲಿತಾಂಶದ ಬಳಿಕ ಷೇರು ಮಾರುಕಟ್ಟೆ ಕುಸಿತ: ಸೆಬಿ, ಸರ್ಕಾರದ ವರದಿ ಕೋರಿ ಸುಪ್ರೀಂಗೆ ಅರ್ಜಿ



**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಲೋಕಸಭೆ ಚುನಾವಣೆಯ ಫಲಿತಾಂಶದ ಬಳಿಕ ಸಂಭವಿಸಿದ ಷೇರು ಮಾರುಕಟ್ಟೆ ಕುಸಿತ ಮತ್ತು ಹೂಡಿಕೆದಾರರ ನಷ್ಟದ ಬಗ್ಗೆ ವಿವರವಾದ ವರದಿ ಸಲ್ಲಿಸಲು ಕೇಂದ್ರ ಸರ್ಕಾರ ಮತ್ತು ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ನಿರ್ದೇಶನ ನೀಡುವಂತೆ ಕೋರಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ.

ಅದಾನಿ-ಹಿಂಡೆನ್‌ಬರ್ಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸಲ್ಲಿಸಲಾದ ರಿಟ್ ಅರ್ಜಿಗೆ ವಕೀಲ ವಿಶಾಲ್ ತಿವಾರಿ ಅವರು ಮಧ್ಯಂತರ ಅರ್ಜಿ ಸಲ್ಲಿಸಿದ್ದಾರೆ. ರಿಟ್ ಅರ್ಜಿಗೆ ಸಂಬಂಧಿಸಿದಂತೆ ಈ ವರ್ಷದ ಜನವರಿಯಲ್ಲಿ ಆದೇಶ ನೀಡಿದ್ದ ಸುಪ್ರೀಂ ಕೋರ್ಟ್, ಹೂಡಿಕೆದಾರರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ನಿಯಂತ್ರಕ ಚೌಕಟ್ಟನ್ನು ಬಲಪಡಿಸಲು ತಜ್ಞರ ಸಮಿತಿಯ ಶಿಫಾರಸುಗಳನ್ನು ಪರಿಗಣಿಸುವಂತೆ ಭಾರತ ಸರ್ಕಾರ ಮತ್ತು ಸೆಬಿಗೆ ಸೂಚಿಸಿತ್ತು.

ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಬಾಕಿ ಉಳಿದಿರುವ ತನಿಖೆಗಳನ್ನು ಸೆಬಿ ಪೂರ್ಣಗೊಳಿಸಿದೆಯೇ? ಯಾವುದಾದರು ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದೆಯೇ? ಎಂಬುವುದು ಅಸ್ಪಷ್ಟವಾಗಿದೆ ಅರ್ಜಿದಾರ ವಕೀಲ ವಿಶಾಲ್ ತಿವಾರಿ ಅವರು ವಾದಿಸಿದ್ದಾರೆ.

ಮಧ್ಯಂತ ಅರ್ಜಿಯಲ್ಲಿ ತಿವಾರಿ ಅವರು ನ್ಯಾಯಾಲಯದ ನಿರ್ದೇಶನ ಪಾಲನೆಗೆ ಸೂಚಿಸಲು ಕೋರಿದ್ದಾರೆ. ಅಂದರೆ, ಅದಾನಿ-ಹಿಂಡೆನ್‌ಬರ್ಗ್ ಪ್ರಕರಣದ ತನಿಖಾ ವರದಿಯನ್ನು ಸಲ್ಲಿಸಲು ಸೆಬಿಗೆ ನಿರ್ದೇಶಿಸುವಂತೆ ಕೋರಿದ್ದಾರೆ.

2024ರ ಲೋಕಸಭಾ ಚುನಾವಣೆಯ ಫಲಿತಾಂಶದ ನಂತರ ಷೇರು ಮಾರುಕಟ್ಟೆಯಲ್ಲಿ ಗಮನಾರ್ಹ ಕುಸಿತ ಕಂಡು ಬಂದಿದೆ ಎಂದು ತಿವಾರಿ ಹೇಳಿದ್ದಾರೆ. ಸುಮಾರು 20 ಲಕ್ಷ ಕೋಟಿಗಳಷ್ಟು ನಷ್ಟವಾಗಿದೆ ಎಂದು ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ ಅವರು ಹೇಳಿದ್ದಾರೆ.

## ಚುನಾವಣೆ ಸೋಲು: ಸಂಘಟಿತ ದಾಳಿಯಿಂದ ಬೆಂಬಲಿಗರ ರಕ್ಷಣೆ ಕೋರಿ ವೈಎಸ್‌ಆರ್‌ಸಿಪಿ ರಾಷ್ಟ್ರಪತಿ ಮೊರೆ



**■ವಿಜಯಸಾಕ್ಷಿ ಸುದ್ದಿ, ಆಂಧ್ರಪ್ರದೇಶ**

ವೈಎಸ್‌ಆರ್ ಕಾಂಗ್ರೆಸ್ ಪಕ್ಷ (ವೈಎಸ್‌ಆರ್‌ಸಿಪಿ) ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರವನ್ನು ಬರೆದಿದ್ದು, ಆಂಧ್ರಪ್ರದೇಶದಲ್ಲಿ ಕಾನೂನು, ಸುವ್ಯವಸ್ಥೆ ರಕ್ಷಣೆಗೆ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದಾರೆ. ಚುನಾವಣೆಯಲ್ಲಿ ನಮ್ಮ ಪಕ್ಷದ ಸೋಲಿನ ನಂತರ ತಮ್ಮ ಬೆಂಬಲಿಗರ ಮೇಲೆ ಸಂಘಟಿತ ಹಿಂಸಾಚಾರ, ಹಲ್ಲೆ ಮಾಡಲಾಗುತ್ತಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿಲಾಗಿದೆ.

ರಾಷ್ಟ್ರಪತಿಗೆ ಮಾತ್ರವಲ್ಲದೆ ಆಂಧ್ರಪ್ರದೇಶದ ರಾಜ್ಯಪಾಲ ಎಸ್ ಅಬ್ದುಲ್ ನಝೀರ್ ಮತ್ತು ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಹರೀಶ್ ಕುಮಾರ್ ಗುಪ್ತಾ ಅವರಿಗೆ ಪಕ್ಷವು ಮಧ್ಯಪ್ರವೇಶಿಸುವಂತೆ ಪತ್ರಗಳನ್ನು ಕಳುಹಿಸಿದೆ.

ತೆಲುಗು ದೇಶಂ ಪಕ್ಷ (ಟಿಡಿಪಿ), ಜನಸೇನಾ ಪಕ್ಷ (ಜೆಎಸ್‌ಪಿ), ಮತ್ತು ಬಿಜೆಪಿ ಮೈತ್ರಿಯು ಆಂಧ್ರ ವಿಧಾನಸಭೆ ಚುನಾವಣೆಯಲ್ಲಿ ವೈಎಸ್‌ಆರ್‌ಸಿಪಿಯನ್ನು ಹೀನಾಯವಾಗಿ ಸೋಲಿಸಿದೆ. ವೈಎಸ್‌ಆರ್‌ಸಿಪಿ ಕೇವಲ 11 ಸ್ಥಾನಗಳನ್ನು ಗಳಿಸಿದೆ. 175 ವಿಧಾನಸಭಾ ಸ್ಥಾನಗಳ ಪೈಕಿ 164 ಸ್ಥಾನಗಳೊಂದಿಗೆ ಮೈತ್ರಿಕೂಟವು ಭಾರಿ ಬಹುಮತದೊಂದಿಗೆ ಚುನಾವಣೆಯನ್ನು ಗೆದ್ದು ಸರ್ಕಾರ ರಚಿಸಲು ಸಜ್ಜಾಗಿದೆ.

ಜೂನ್ 4 ರಂದು ಫಲಿತಾಂಶಗಳು ಪ್ರಕಟವಾದ ನಂತರ ತನ್ನ ಬೆಂಬಲಿಗರನ್ನು ಗುರಿಯಾಗಿಸಿಕೊಂಡು ಹಲವಾರು ಹಿಂಸಾತ್ಮಕ ಕೃತ್ಯಗಳು ನಡೆದಿದೆ. ದಾಳಿಯ ಹಿಂದೆ ಭಾಗಿಯಾಗಿರುವ ಪಕ್ಷವನ್ನು ಪತ್ರದಲ್ಲಿ ಉಲ್ಲೇಖಿಸದಿದ್ದರೂ, ಪಕ್ಷದ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಗಳು TDP ಮತ್ತು JSP ಬಗ್ಗೆ ಆರೋಪವನ್ನು ಮಾಡಿದೆ. ಪಕ್ಷದ ಸ್ಥಳೀಯ ಕಾರ್ಯಕರ್ತರ ನಿವಾಸಗಳ ಮೇಲೆ ದಾಳಿ ನಡೆಸಿ ಅವರ ಆಸ್ತಿಪಾಸ್ತಿಗಳನ್ನು ನಾಶಪಡಿಸಿರುವ ಬಗ್ಗೆ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ವೀಡಿಯೊವೊಂದರಲ್ಲಿ, ವೈಎಸ್ ಜಗನ್ ಮೋಹನ್ ರೆಡ್ಡಿ ಮತ್ತು ವೈಎಸ್‌ಆರ್‌ಸಿಪಿ ಮಾಜಿ ಶಾಸಕಿ ಮತ್ತು ಸಚಿವೆ ರೋಜಾ ಅವರ ಫೋಟೋಗಳನ್ನು ಹೊಂದಿರುವ ನಗರಿ ಕ್ಷೇತ್ರದಲ್ಲಿ ಕಲ್ಲಿನ ಫಲಕವನ್ನು ನಾಶಪಡಿಸಲಾಗಿದೆ. ಶುಕ್ರವಾರ ಕೃಷ್ಣಾ ಜಿಲ್ಲೆಯ ಗುಡಿವಾಡದಲ್ಲಿರುವ ಮಾಜಿ ಶಾಸಕ ಕೊಡಲಿ ನಾನಿ ಅವರ ನಿವಾಸದ ಮೇಲೆ ಟಿಡಿಪಿ ಬೆಂಬಲಿಗರು ಮೊಟ್ಟೆ ದಾಳಿ ನಡೆಸಿದ್ದಾರೆ. ದಾಳಿಗಳ ಪ್ರಮಾಣ ಕಳೆದ 24 ಗಂಟೆಗಳಲ್ಲಿ ಹೆಚ್ಚಾಗಿದೆ. ವೈಎಸ್‌ಆರ್‌ಸಿಪಿ ಬೆಂಬಲಿಗರನ್ನು ವಿಶೇಷವಾಗಿ ಎಸ್ಸಿ, ಎಸ್ಟಿ, ಒಬಿಸಿ ಅಲ್ಪಸಂಖ್ಯಾತ ಸಮುದಾಯಗಳು, ಮಹಿಳೆಯರು ಮತ್ತು ಮಕ್ಕಳು ಸೇರಿ ದುರ್ಬಲ ಗುಂಪುಗಳ ಜನರನ್ನು ಬೆದರಿಸುವ ಸಂಘಟಿತ ಪ್ರಯತ್ನದ ಭಾಗವಾಗಿದೆ. ಈ ಬಗ್ಗೆ ಸ್ಥಳೀಯ ಕಾನೂನು ಜಾರಿ ಸಂಸ್ಥೆಗಳು ಕ್ರಮ ಕೈಗೊಳ್ಳಲು ವಿಫಲವಾಗಿದೆ.

ಆದ್ದರಿಂದ ಅಧಿಕಾರಿಗಳು ಈ ಸಮಸ್ಯೆಯ ಬಗ್ಗೆ ತಕ್ಷಣ ಮತ್ತು ಗಂಭೀರವಾಗಿ ಗಮನಹರಿಸಬೇಕು ಎಂದು ರಾಷ್ಟ್ರಪತಿಗೆ ಬರೆದ ಪತ್ರದಲ್ಲಿ ನಿರಂಜನ್ ರೆಡ್ಡಿ ಒತ್ತಾಯಿಸಿದ್ದಾರೆ.

## ಆಂಧ್ರದಲ್ಲಿ ಮುಸ್ಲಿಮರ 4% ಮೀಸಲಾತಿಗೆ ಪಕ್ಷವು ಬದ್ಧವಾಗಿದೆ: ಟಿಡಿಪಿ



**■ವಿಜಯಸಾಕ್ಷಿ ಸುದ್ದಿ, ಆಂಧ್ರಪ್ರದೇಶ**

ಒಬಿಸಿ ಪಟ್ಟಿಯಡಿ ಮುಸ್ಲಿಮರಿಗೆ ನೀಡಿರುವ 4% ಮೀಸಲಾತಿಗೆ ತಮ್ಮ ಪಕ್ಷವು ಬದ್ಧವಾಗಿದೆ ಎಂದು ಟಿಡಿಪಿ ಪ್ರಧಾನ ಕಾರ್ಯದರ್ಶಿ ಮತ್ತು ಎನ್ ಚಂದ್ರಬಾಬು ನಾಯ್ಡು ಅವರ ಪುತ್ರ ನಾರಾ ಲೋಕೇಶ್ ಶುಕ್ರವಾರ ಹೇಳಿದ್ದಾರೆ.

ಮಿತ್ರ ಪಕ್ಷವಾದ ಬಿಜೆಪಿಯಿಂದ ಭಿನ್ನವಾದ ನಿಲುವಿನಲ್ಲಿ, ಬಡ ಮುಸ್ಲಿಮರು ಬಡತನದಿಂದ ಹೊರಬರಲು ಸಹಾಯ ಮಾಡುವ ಉದ್ದೇಶದಿಂದ ಮೀಸಲಾತಿಯನ್ನು ಕಲ್ಯಾಣ ಕ್ರಮ ಎಂದು ಲೋಕೇಶ್ ಬಣ್ಣಿಸಿದ್ದು, ಟಿಡಿಪಿ ಇದನ್ನು ಅಲ್ಪಸಂಖ್ಯಾತರ ಓಲೈಕೆಯಾಗಿ ನೋಡುವುದಿಲ್ಲ ಎಂದು ಹೇಳಿದ್ದಾರೆ.

ಒಂದು ನಿರ್ದಿಷ್ಟ ವಿಭಾಗವು ಬಡತನದಲ್ಲಿ ವಾಸಿಸುತ್ತಿದ್ದರೆ ಒಂದು ರಾಷ್ಟ್ರ ಅಥವಾ ರಾಜ್ಯವು ಅಭಿವೃದ್ಧಿ ಹೊಂದುತ್ತದೆ ಎಂದು ಹೇಳಲಾಗುವುದಿಲ್ಲ.

ಕಡಿಮೆ ಪ್ರಾತಿನಿಧ್ಯ ಇರುವ ಸಮುದಾಯಗಳಿಗೆ ಅವಕಾಶಗಳನ್ನು ಸೃಷ್ಟಿಸುವಂತಹ ನೀತಿಗಳನ್ನು ಸರ್ಕಾರಗಳು ಜಾರಿಗೊಳಿಸಬೇಕು. ಮುಸ್ಲಿಮರಿಗೆ ಶೇಕಡ 4ರಷ್ಟು ಮೀಸಲಾತಿ ನೀಡುವ ನಿರ್ಧಾರವನ್ನು ಆ ದೃಷ್ಟಿಕೋನದಿಂದ ಕೈಗೊಳ್ಳಲಾಗಿದೆಯೇ ವಿನಃ ರಾಜಕೀಯ ಲಾಭಕ್ಕಾಗಿ ಅಥವಾ ಯಾರನ್ನೂ ಓಲೈಸುವ ಉದ್ದೇಶದಿಂದ ಕೈಗೊಂಡಿಲ್ಲ ಎಂದು ಹೇಳಿದ್ದಾರೆ.

# ಉತ್ತಮ ಪರಿಸರದಿಂದ ಉತ್ತಮ ಆರೋಗ್ಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಭಿವೃದ್ಧಿ ಯುಗ ಎಂದು ಗಿಡ-ಮರ ಕಡಿಯುತ್ತಿರುವುದರಿಂದ ತಾಪಮಾನ ಹೆಚ್ಚಾಗುತ್ತಿದೆ. ಆದ್ದರಿಂದ ಪ್ರಕೃತಿ ಇಂದು ನಮ್ಮ ಮೇಲೆ ಮುನಿಸಿಕೊಳ್ಳುತ್ತಿದೆ.

ಇದನ್ನು ತಪ್ಪಿಸಬೇಕೆಂದರೆ ಸಾಲುಮರದ ತಿಮ್ಮಕ್ಕನಂತೆ ಗಿಡ ನೆಡುವ ಕಾರ್ಯ ನಮ್ಮಿಂದಾಗಬೇಕು ಎಂದು ಧಾರವಾಡದ ಶ್ರೀ ಬಸವೇಶ್ವರ ರೂರಲ್ ಎಜ್ಯುಕೇಶನ್ ಟ್ರಸ್ಟ್‌ನ ಅಧ್ಯಕ್ಷ ಡಾ. ಶರಣಪ್ಪ ಕೊಟಗಿ ಅಭಿಪ್ರಾಯಪಟ್ಟರು.

ನಗರದ ವಿಜಯನಗರ ಪಿ.ಯು ಕಾಲೇಜಿನಲ್ಲಿ ಧಾರವಾಡ ಜಿಲ್ಲಾ ಅಭಿಯಾನ ಪರಿಸರ ಸಮಿತಿ, ಕೆ.ಎಸ್.ಎಸ್ ಪಿಯು ಕಾಲೇಜ ವಿದ್ಯಾನಗರ ಮತ್ತು ಶ್ರೇಯಾ ಸೇವಾ ಫೌಂಡೇಶನ್ ಹುಬ್ಬಳ್ಳಿ ವತಿಯಿಂದ ಶನಿವಾರ ಹಮ್ಮಿಕೊಳ್ಳಲಾಗಿದ್ದ 'ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಉತ್ತಮ ಪರಿಸರ ಇರುವಲ್ಲಿ ಆರೋಗ್ಯ ಇರುತ್ತದೆ. ಪರಿಸರ ಸಂರಕ್ಷಣೆ ಮಾಡುವುದರ ಬಗ್ಗೆ ಅರಿವು ಮೂಡಿಸುವ ಕಾರ್ಯ ಶಾಲಾ-ಕಾಲೇಜು ಮತ್ತು ಎನ್‌ಜಿಓಗಳಿಂದ ಆಗಬೇಕಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಸಮಾಜ ಸೇವಕ ಸಂತೋಷ ಶೆಟ್ಟಿ, ಡಾ. ರಮೇಶ ಮಹಾದೇವಪ್ಪನವರ, ಸಂತೋಷ ವರ್ಣೆಕರ, ವಿ.ಜಿ. ಪಾಟೀಲ ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ಪರಿಸರ ದಿನಾಚರಣೆ ಪ್ರಯುಕ್ತವಾಗಿ ಪರಿಸರ ಗೀತಗಾಯನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ಭಾಗಿಯಾಗಿದ್ದ ಮಹಿಳಾ ಸಂಘಗಳಿಗೆ ಬಹುಮಾನ ಹಾಗೂ ಸಸಿಗಳನ್ನು ವಿತರಿಸಲಾಯಿತು.

ಸಂದೀಪ ಬೂದಿಹಾಳ, ಲತಾ ಕೆ.ಶಿಂಧೆ, ವಾಯ್.ಎನ್. ಮಾಳಗಿ, ಗದಗಯ್ಯ ಹಿರೇಮಠ, ಬಸವರಾಜ ಸುಳ್ಳದ, ಹುಬ್ಬಳ್ಳಿ ಧಾರವಾಡದ ವಿವಿಧ ಮಹಿಳಾ ಸಂಘದ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಉಪಸ್ಥಿತರಿದ್ದರು.

ವಾಯ್.ಎನ್. ಮಾಳಗಿ ಪ್ರಾರ್ಥಿಸಿದರು. ಜಯಶ್ರೀ ಗೌಳಿಯವರ ಬಹುಮಾನ ವಿತರಣೆ ನಡೆಸಿಕೊಟ್ಟರು. ರಾಮು ಮೂಲಗಿ ಸ್ವಾಗತಗೀತೆ ಹಾಡಿದರು. ಆರ್.ಎಂ. ಗೋಗೇರಿ ಸ್ವಾಗತಿಸಿದರು. ಬೀರೇಶ ತಿರಕಪ್ಪನವರ ನಿರೂಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆ.ಎಸ್.ಎಸ್ ಉಪಾಧ್ಯಕ್ಷ ಡಾ. ಶಾಂತಣ್ಣ ಕಡಿವಾಲ ಮಾತನಾಡುತ್ತ, ಸಾಲುಮರದ ತಿಮ್ಮಕ್ಕನಂತೆ ಗಿಡ-ಮರಗಳನ್ನು ಬೆಳೆಸುವಲ್ಲಿ ಎಲ್ಲರೂ ಅವರೊಟ್ಟಿಗೆ ಕೈ ಜೋಡಿಸಿ ಹಸಿರನ್ನು ಉಸಿರೆಂದು ಪ್ರೀತಿಸಿ, ಗಿಡ-ಮರಗಳನ್ನು ಬೆಳಸಬೇಕು ಎಂದು ಹೇಳಿದರು.

## ಟಿ.ಎ. ನಾರಾಯಣಗೌಡರ ಜನ್ಮದಿನದ ಪ್ರಯುಕ್ತ

# ಹಣ್ಣು-ಹಾಲು ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ 57ನೇ ಜನ್ಮದಿನದ ಪ್ರಯುಕ್ತ ಕರವೇ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಮಾಲಿಪಾಟೀಲ ಇವರ ನೇತೃತ್ವದಲ್ಲಿ ನಗರದ ದುಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಮತ್ತು ಶಿವರತ್ನಾ ವೃದ್ಧಾಶ್ರಮದ ವೃದ್ಧರಿಗೆ ಹಣ್ಣು-ಹಾಲು ಮತ್ತು ಬ್ರೆಡ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕರವೇ ರಾಜ್ಯ ಸಾಮಾಜಿಕ ಜಾಲತಾಣದ ಪ್ರಧಾನ ಸಂಚಾಲಕ ಸಚಿನ್ ಗಾಣಿಗೇರ, ಸಂಚಾಲಕ ಚೇತನ ಎಸ್. ಕಣವಿ, ಕರವೇ ಮುಖಂಡರಾದ ಆನಂದ ಹೊಸಮನಿ, ನಾಗಪ್ಪ ಅಣ್ಣಿಗೇರಿ, ತೌಸಿಫ್ ಡಾಲಾಯತ್, ಮಹಾದೇವಿ ದೊಡ್ಡಗೌಡ್ರ, ಯಲ್ಲಪ್ಪ ಭೋವಿ, ಈರಣ್ಣ ಹುರಕಡ್ಲಿ, ಬಕ್ಷಿರ್‌ಸಾಬ್ ನದಾಫ, ಸಂಗಮೇಶ ಅಂಗಡಿ, ಕಿರಣ ಭಾತಖಾನಿ, ಮಂಜುನಾಥ ನರೇಗಲ್ ಮುಂತಾದವರು ಉಪಸ್ಥಿತರಿದ್ದರು.

# ನೀಟ್ ಪರೀಕ್ಷೆಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ



ಅಖಿಲ ಭಾರತ ಮಟ್ಟದಲ್ಲಿ ವೈದ್ಯಕೀಯ (ನೀಟ್) ಪ್ರವೇಶ ಪರೀಕ್ಷೆಯ ಫಲಿತಾಂಶವು ಪ್ರಕಟವಾಗಿದ್ದು, ಸ್ಥಳೀಯ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿ ಕುಮಾ ರ ಮಂಜುನಾಥ ಬಾದಾಮಿ 720 ಅಂಕಗಳಿಗೆ 612 ಅಂಕ ಗಳಿಸಿ, ಉತ್ತಮ ಸಾಧನೆ ಮಾಡಿದ್ದಾರೆ.

ಕಾಲೇಜಿನ ಇನ್ನುಳಿದ ವಿದ್ಯಾರ್ಥಿಗಳಾದ ಅನ್ನಪೂರ್ಣ ಬೋರಟ್ಟಿ-404, ಮಹಮ್ಮದ ಹನೀಫ್ ಎ-287, ವಿದ್ಯಾ ಮುದರಡ್ಡಿ-285, ವೈಷ್ಣವಿ ಬಡಿಗೇರ-214, ಸೃಷ್ಟಿ ಹಿರೇಗೌಡರ-210, ಸಹನಾ ಪಾಟೀಲ-181, ಸೌಮ್ಯ ಹಿರೇಮಠ-175, ಸ್ನೇಹಾ ಮಣಕವಾಡ-167, ಮಹಮ್ಮದ ಹಷ್ಮಿ-157 ಅಂಕಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಸಾಧನೆಗೈದ ವಿದ್ಯಾರ್ಥಿಗಳಿಗೆ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರು, ಸರ್ವ ಸದಸ್ಯರು, ಪ್ರಾಚಾರ್ಯರು, ಉಪನ್ಯಾಸಕರು, ಹಾಗೂ ಬೋಧಕೇತರ ಸಿಬ್ಬಂದಿಗಳು ಅಭಿನಂದಿಸಿ, ಶುಭ ಹಾರೈಸಿದ್ದಾರೆ.

# ಕಲಾವಿದರನ್ನು ಪ್ರೋತ್ಸಾಹಿಸುವ ಕಾರ್ಯ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದಲ್ಲಿ ನಟರಂಗ ಸಾಂಸ್ಕೃತಿಕ ಕೇಂದ್ರ ಗದಗ ಸಂಸ್ಥೆಯವರು ಆಯೋಜಿಸಿದ ಮಕ್ಕಳ ಕಲರವ-2024 ಬೇಸಿಗೆ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಸಂಸ್ಥೆಗೆ ಸುಮಾರು ವರ್ಷಗಳಿಂದ ಬೆನ್ನೆಲುಬಾಗಿ ನಿಂತು ಹಾಗೂ ಗದುಗಿನಲ್ಲಿ ಜರುಗುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪ್ರೋತ್ಸಾಹಿಸಿ ಕಲಾವಿದರ ಬೆಳವಣಿಗೆಗೆ ಹಾಗೂ ಅತ್ಯುತ್ತಮ ಕಲಾವಿದರನ್ನು ರಾಜ್ಯದ ಪ್ರಸಿದ್ಧ ಕನ್ನಡ ಟಿವಿ ಮಾಧ್ಯಮಗಳಿಗೆ ಕಳುಹಿಸಿರುವ ಹಾಗೂ ಸಂಸ್ಥೆಯ ಬೆಳುವಣಿಗೆಗೆ ಸಹಕಾರ ನೀಡುತ್ತಿರುವ ರೋಟರಿ ಗದಗ ಸೆಂಟ್ರಲ್‌ನ ಅಧ್ಯಕ್ಷ ವಿಜಯಕುಮಾರ್ ಹಿರೇಮಠ್ ಅವರಿಗೆ ಕನ್ನಡ ಚಿತ್ರರಂಗದ ಹಿರಿಯ ನಟ ದೊಡ್ಡಣ್ಣ ಅವರು ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಟ ದೊಡ್ಡಣ್ಣ, ಕಲೆಯನ್ನು ಗುರುತಿಸಿ ಕಲಾವಿದರನ್ನು ಪ್ರೋತ್ಸಾಹಿಸಿ ಬೆಳೆಸುವ ವಿಜಯಕುಮಾರ ಹಿರೇಮಠ ಅವರ ಕಾರ್ಯವನ್ನು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಝೀ ಕನ್ನಡದ ಪ್ರೊಡಕ್ಷನ್ ಹೆಡ್ ಆಗಿರುವ ಮೋಹನ್‌ಕುಮಾರ್ ಕೆ, ಡ್ರಾಮಾ ಜೂನಿಯರ್ಸ್ ಹಾಗೂ ಕಾಮಿಡಿ ಕಿಲಾಡಿಗಳ ಮೇನ್ ಮೆಂಟರ್ ಪ್ರಭುರಾಜ್, ನಟರಂಗ ಸಂಸ್ಥೆಯ ಅಧ್ಯಕ್ಷ ಸೋಮಶೇಖರ್ ಚಿಕ್ಕಮಠ, ರೋಟರಿ ಸದಸ್ಯರಾದ ಅಪ್ಪುರಾಜ ಭದ್ರಕಾಳಮ್ಮನಮಠ ಹಾಗೂ ನಗರದ ಖ್ಯಾತ ವೈದ್ಯರುಗಳಾದ ಡಾ. ವೀರೇಶ ಹಂಚಿನಾಳ, ಡಾ. ರಾಜಶೇಖರ ವ್ಯಾಗೇರಿ ಹಾಗೂ ಮುರಿಗೇಶ ಶೆಟ್ಟರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಲೋಕಸಭೆ ಫಲಿತಾಂಶ 'ವಿಭಜನೆ, ದ್ವೇಷ ರಾಜಕಾರಣದ ನಿರ್ಣಾಯಕ ನಿರಾಕರಣೆ': ಖರ್ಗೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಚುನಾವಣೆಯ ಜನಾದೇಶವು ವಿಭಜನೆ ಮತ್ತು ದ್ವೇಷ ರಾಜಕೀಯದ 'ನಿರ್ಣಾಯಕ ನಿರಾಕರಣೆ'. ಇಂಡಿಯಾ ಒಕ್ಕೂಟ ಸಂಸತ್ತಿನ ಒಳಗೆ ಮತ್ತು ಹೊರಗೆ ಒಗ್ಗಟ್ಟಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ದೆಹಲಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು " ಕಾಂಗ್ರೆಸ್ ಮತ್ತೆ ಪುಟಿದೇಳುತ್ತಿರುವ ಸಂದರ್ಭದ ಕೆಲ ರಾಜ್ಯಗಳಲ್ಲಿ ತನ್ನ ಸಾಮರ್ಥ್ಯ ಮತ್ತು ನಿರೀಕ್ಷೆಗಳಿಗೆ ಅನುಗುಣವಾಗಿ ಕಾರ್ಯ ನಿರ್ವಹಿಸಿಲ್ಲ. ಅಲ್ಲಿ ಸ್ವಲ್ಪ ಸಮಯ ಬೇಕಾಗಬಹುದು ಎಂದಿದ್ದಾರೆ.

ನಾವು ಈ ಹಿಂದೆ ವಿಧಾನಸಭಾ ಚುನಾವಣೆಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಸರ್ಕಾರ ರಚಿಸಿದ್ದ ರಾಜ್ಯಗಳಲ್ಲಿಯೂ ನಮ್ಮ ಸಾಧನೆ ಪುನರಾವರ್ತಿಸಲು ಸಾಧ್ಯವಾಗಲಿಲ್ಲ. ಅಂತಹ ರಾಜ್ಯಗಳ ಬಗ್ಗೆ ಪ್ರತ್ಯೇಕ ಚರ್ಚೆ ಶೀಘ್ರದಲ್ಲೇ ನಡೆಸಲಾಗುವುದು" ಎಂದು ಖರ್ಗೆ ಹೇಳಿದ್ದಾರೆ.

"ಸಾಂಪ್ರದಾಯಿಕವಾಗಿ ಕಾಂಗ್ರೆಸ್ ಪರ ಒಲವು ಹೊಂದಿರುವ ರಾಜ್ಯಗಳಲ್ಲಿ ನಮಗೆ ಇನ್ನೂ ಅವಕಾಶವಿದೆ. ಈ ಅವಕಾಶಗಳನ್ನು ನಾವು ನಮ್ಮ ಸ್ವಂತ ಲಾಭಕ್ಕಾಗಿ ಬಳಸದೆ, ನಮ್ಮ ಜನರ ಅನುಕೂಲಕ್ಕಾಗಿ ಬಳಸಿಕೊಳ್ಳಬೇಕು. ಈ ಕಾರ್ಯಯವನ್ನು ಶೀಘ್ರದಲ್ಲೇ ಮಾಡಲಾಗುವುದು" ಎಂದು ಹೇಳಿದ್ದಾರೆ.

"ಪಕ್ಷ ಅಧಿಕಾರದಲ್ಲಿದ್ದರೂ, ಇಲ್ಲದಿದ್ದರೂ ಜನರ ನಡುವೆ 365 ದಿನದ 24 ಗಂಟೆಯೂ ಕೆಲಸ ನಿರ್ವಹಿಸಲಿದೆ" ಎಂದು ಖರ್ಗೆ ತಿಳಿಸಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಪರ ಕೆಲಸ ಮಾಡಿದ ನಾಯಕರು ಮತ್ತು ಕಾರ್ಯಕರ್ತರ ಇಚ್ಛಾಶಕ್ತಿ ಮತ್ತು ಸಂಕಲ್ಪವನ್ನು ಕಾಂಗ್ರೆಸ್ ಕಾರ್ಯಾಕಾರಿ ಸಮಿತಿ ಅಭಿನಂದಿಸಿದೆ.

ಆಡಳಿತ ಪಕ್ಷದ ಸರ್ವಾಧಿಕಾರ ಮತ್ತು ಪ್ರಜಾಪ್ರಭುತ್ವ ವಿರೋಧಿ ನಿಲುವುಗಳ ವಿರುದ್ಧ ಜನರು ಧ್ವನಿ ಎತ್ತಿದ್ದಾರೆ. ಕಳೆದ 10 ವರ್ಷಗಳ ರಾಜಕೀಯವನ್ನು ತಿರಸ್ಕರಿಸಿದ್ದಾರೆ.

# ಸೇವಾ ನಿವೃತ್ತಿ ಹೊಂದಿದ ನೀಲಕಂಠ ಮುಕ್ಕಣ್ಣವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ


ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶಾಸ್ತ್ರೀಜಿ ಪ್ರೌಢಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ, ಇತ್ತೀಚೆಗೆ ನಿವೃತ್ತಿ ಹೊಂದಿದ ನೀಲಕಂಠ ಸಿ.ಮುಕ್ಕಣ್ಣವರ ಅವರನ್ನು ಲಕ್ಕುಂಡಿ ಗ್ರಾಮದ ಅವರ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ, ರೈತ ಮೋರ್ಚಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶೋಕ ಕರೂರ, ಬಿಜೆಪಿ ಮುಖಂಡರಾದ ಹನಮಂತಪ್ಪ ಅಳವಂಡಿ, ಕಾನೂನು ಪ್ರಕೋಷ್ಠ ಸಂಚಾಲಕ ಹಾಗೂ ವಕೀಲರಾದ ಕೆ.ಪಿ. ಕೊಟ್ಟಿಗೌಡರ, ವಕೀಲರಾದ ಮಂಜುನಾಥ ಶಾಂತಗೇರಿ, ಮಾಧ್ಯಮ ಸಂಚಾಲಕ ರಾಜು ಹೊಂಗಲ್ ಮುಂತಾದವರು ಉಪಸ್ಥಿತರಿದ್ದು ಶುಭ ಕೋರಿದರು.

# ವಲಯ ಮಟ್ಟದ ವ್ಹಾಲಿಬಾಲ್ ಪಂದ್ಯಾವಳಿ ಮುಂಡರಗಿಯ ಕೆ.ಆರ್. ಬೆಲ್ಲದ ಕಾಲೇಜು ತಂಡಕ್ಕೆ ಜಯ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಪಟ್ಟಣದ ಬೆನಕಪ್ಪ ಶಂಕ್ರಪ್ಪ ಸಿಂಹಾಸನದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ 2023-24ನೇ ಸಾಲಿನ ಕರ್ನಾಟಕ ವಿಶ್ವವಿದ್ಯಾಲಯ ಪುರುಷರ 2ನೇ ವಲಯ ಮಟ್ಟದ ವ್ಹಾಲಿಬಾಲ್ ಪಂದ್ಯಾವಳಿಯಲ್ಲಿ ಮುಂಡರಗಿಯ ಕೆ.ಆರ್. ಬೆಲ್ಲದ್ ಕಲಾ-ವಾಣಿಜ್ಯ ಮಹಾವಿದ್ಯಾಲಯ ತಂಡ ಜಯ ಗಳಿಸಿತು.

ರೋಣ ರಸ್ತೆಯ ಬಿಎಸ್‌ಎಸ್ ಸರ್ಕಾರಿ ಕಾಲೇಜಿನಲ್ಲಿ ನಡೆದ ಪಂದ್ಯಾವಳಿಯಲ್ಲಿ 15 ಕಾಲೇಜುಗಳ ತಂಡಗಳು ಭಾಗವಹಿಸಿದ್ದವು. ಮುಂಡರಗಿಯ ಕೆ.ಆರ್. ಬೆಲ್ಲದ್ ಕಲಾ ತಂಡ 25-16 ಅಂಕಗಳೊಂದಿಗೆ ಗೆಲುವು ಸಾಧಿಸಿತು. ಹುಬ್ಬಳ್ಳಿಯ ಗ್ಲೋಬಲ್ ಕಾಲೇಜ್ ಆಫ್ ಮ್ಯಾನೇಜ್ಮೆಂಟ್ ತಂಡವು ಕೆ.ಆರ್. ಬೆಲ್ಲದ್ ಕಲಾ ಕಾಲೇಜು ವಿರುದ್ಧ ಫೈನಲ್ ಪಂದ್ಯದಲ್ಲಿ ಸೋಲೊಪ್ಪಿಕೊಂಡು ರನ್ನರ್ ಅಪ್ ತಂಡವಾದರೆ, ಪಟ್ಟಣದ ಎಸ್.ಎಂ. ಭೂಮರಡ್ಡಿ ಪದವಿ ಮಹಾವಿದ್ಯಾಲಯ ತಂಡ ತೃತೀಯ ಸ್ಥಾನವನ್ನು ಅಲಂಕರಿಸಿತು. ಮಹಮ್ಮದ್ ರಸುಲ್ ಸವಣೂರು ಉತ್ತಮ ಪಾಸರ್, ಯಲ್ಲಪ್ಪಗೌಡ ಎಸ್, ಉತ್ತಮ ಅಟ್ಯಾಕರ್ ಪ್ರಶಸ್ತಿ ಪಡೆದರು.

ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಶಿವರಾಜ ಘೋರ್ಪಡೆ, ಶ್ರೀಧರ್ ಬಿದರಳ್ಳಿ, ಪಿ.ಎಂ. ದಿವಾಣದ, ಎಫ್.ಎಸ್. ಕರೀದುರಗನವರ ಹಾಗೂ ಪ್ರಾಚಾರ್ಯ ಮಹೇಂದ್ರ ಜಿ ವಿಜೇತ ತಂಡಗಳನ್ನು ಅಭಿನಂದಿಸಿದರು.

ಕ್ರೀಡಾ ಸಂಯೋಜನಾಧಿಕಾರಿ ಹಿತೀಶ್ ಬಿ, ಕ್ರೀಡಾ ಸಂಚಾಲಕ ಡಾ. ಎಂ.ವಾಯ್. ಜೆಟ್ಟೆಣ್ಣವರ, ದೈಹಿಕ ನಿರ್ದೇಶಕ ಲಕ್ಷ್ಮಣ್ ಹುಲ್ಲೂರ ಸೇರಿ ವಿವಿಧ ಕಾಲೇಜುಗಳ ಕ್ರೀಡಾಳುಗಳು, ದೈಹಿಕ ನಿರ್ದೇಶಕರು, ಸಿಬ್ಬಂದಿಗಳಿದ್ದರು.

# ಕೌಶಲ್ಯ ಆಧಾರಿತ ತರಬೇತಿ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಬಾಲಕಿರ ಸರ್ಕಾರಿ ಪ್ರೌಢಶಾಲೆ, ಕುಷ್ಟಗಿಯಲ್ಲಿ ಎನ್ ಎಸ್ ಕ್ಯೂಎಫ್ ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸುರೇಂದ್ರ ಆರ್ ಕಾಂಬಳೆ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಡಯಟ್‌ನ ಉಪನ್ಯಾಸಕರ ರಾಜೇಂದ್ರ ಬೆಳ್ಳಿ, ಕ್ಷೇತ್ರ ಸಮನ್ವಧಿಕಾರಿಗಳಾದ ಜಗದೀಶಪ್ಪ ಎಂ, ಶಾಲೆಯ ಪ್ರಭಾರಿ ಉಪ ಪ್ರಾಚಾರ್ಯರಾದ ನಾಗಪ್ಪ ಬಿಳಿಯಪ್ಪನವರ್, ನೋಡಲ್ ಅಧಿಕಾರಿ ಲೋಕೇಶ್ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಪ್ರದೀಪ್ ಗೋಡಿಯವರ, ಸೃಜನ ಹಿರೇಮಠ್ ಹಾಗೂ ವಿವಿಧ ಶಾಲೆಗಳ ಮುಖ್ಯ ಗುರುಗಳು, ಸಹ ಶಿಕ್ಷಕರು, ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗ ಹಾಜರಿದ್ದರು.

# INDIA ಇಂದು ಸರ್ಕಾರ ರಚನೆಗೆ ಹಕ್ಕು ಮಂಡಿಸದೇ ಇರಬಹುದು, ಆದ್ರೆ ಮುಂದೆ ಮಂಡಿಸಲ್ಲ ಅಂತ ಅಲ್ಲ



■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ವಿರೋಧ ಪಕ್ಷಗಳ ಮೈತ್ರಿಕೂಟ ಇಂಡಿಯಾ ಬಣ ಇಂದು ಸರ್ಕಾರ ರಚನೆಗೆ ಹಕ್ಕು ಮಂಡಿಸದೇ ಇರಬಹುದು, ಆದರೆ ಮುಂದಿ ಸರ್ಕಾರ ರಚನೆಗೆ ಹಕ್ಕು ಮಂಡಿಸುವುದಿಲ್ಲ ಎಂದಲ್ಲ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶನಿವಾರ ಹೇಳಿದ್ದಾರೆ.

ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ, ತಮ್ಮ ಪಕ್ಷ "ಕಾದು ನೋಡುವ" ಮೋಡ್‌ನಲ್ಲಿರುತ್ತದೆ ಮತ್ತು "ದುರ್ಬಲ ಹಾಗೂ ಅಸ್ಥಿರ" ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವನ್ನು ಅಧಿಕಾರದಿಂದ ದೂರವಿಟ್ಟರೆ ನನಗೆ ಸಂತೋಷವಾಗುತ್ತದೆ ಎಂದು ಹೇಳಿದರು.

"ದೇಶಕ್ಕೆ ಬದಲಾವಣೆ ಬೇಕು; ದೇಶ ಬದಲಾವಣೆ ಬಯಸುತ್ತಿದೆ. ಈ ಜನಾದೇಶ ಬದಲಾವಣೆಗಾಗಿತ್ತು. ನಾವು ಕಾಯುತ್ತಿದ್ದೇವೆ ಮತ್ತು ಪರಿಸ್ಥಿತಿಯ ಮೇಲೆ ನಿಗಾ ಇಡುತ್ತಿದ್ದೇವೆ. ಈ ಜನಾದೇಶ ನರೇಂದ್ರ ಮೋದಿ ವಿರುದ್ಧವಾಗಿದೆ. ಆದ್ದರಿಂದ ಅವರು ಈ ಬಾರಿ ಪ್ರಧಾನಿಯಾಗಬಾರದು. ಬೇರೆಯವರು ಆಗಬೇಕಿತ್ತು. ಆದರೂ ಅವರಿಗೆ ಅಧಿಕಾರ ವಹಿಸಿಕೊಳ್ಳಲು ಅವಕಾಶ ನೀಡಲಾಗಿದೆ" ಎಂದು ಹೊಸದಾಗಿ ಆಯ್ಕೆಯಾದ ಟಿಎಂಸಿ ಸಂಸದರ ಸಭೆಯ ನಂತರ ಮಮತಾ ಬ್ಯಾನರ್ಜಿ ಸುದ್ದಿಗಾರರಿಗೆ ತಿಳಿಸಿದರು.

# ಕಲ್ಮೇಶ್ವರ ಕಾಲೇಜಿನಲ್ಲಿ ವಿಶ್ವ ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಹೊಳೆಆಲೂರಿನ ಶ್ರೀ ಕಲ್ಮೇಶ್ವರ ವಿದ್ಯಾಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಎನ್‌ಎಸ್‌ಎಸ್ ಘಟಕ 1 ಮತ್ತು 2ರ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮಹಾವಿದ್ಯಾಲಯದ ಆವರಣದಲ್ಲಿ ನಡೆದ ಕಾರ್ಯಕ್ರಮಕ್ಕೆ ಪ್ರಾಚಾರ್ಯ ಡಾ. ಪ್ರಭು ಗಂಜಿಹಾಳ ಚಾಲನೆ ನೀಡಿ ಮಾತನಾಡಿ, ಮರಗಳನ್ನು ಬೆಳೆಸುವ ಮೂಲಕ ಎಲ್ಲೆಡೆ ಹಸಿರು ಪರಿಸರವನ್ನು ನಿರ್ಮಾಣ ಮಾಡಬೇಕಾಗಿದೆ. ಪ್ರತಿಯೊಬ್ಬರೂ ಸ್ವಯಂಪ್ರೇರಿತರಾಗಿ ಸಸಿಗಳನ್ನು ನೆಟ್ಟು ಆರೈಕೆ ಮಾಡಿದಲ್ಲಿ ಎಲ್ಲೆಡೆ ಶುದ್ಧವಾದ ಗಾಳಿ ಪಡೆಯಬಹುದು. ಮರ ಇದ್ದರೆ ಮಳೆ, ಮಳೆ ಇದ್ದರೆ ಬೆಳೆ. ಬೆಳೆ ಇದ್ದರೆ ಬದುಕು. ಇದು ಮನುಕುಲಕ್ಕೆ ಸಂಜೀವಿನಿ ಎಂಬುದನ್ನು ಮರೆಯಬಾರದು. ಪರಿಸರ ಇದ್ದರೆ ಮಾತ್ರ ಜೀವಸಂಕುಲ ಉಳಿಯಲು ಸಾಧ್ಯ ಎಂದರು.

ಎನ್‌ಎಸ್‌ಎಸ್ ಅಧಿಕಾರಿ ಪ್ರೊ.ವಿಶ್ವನಾಥ ಪಾಟೀಲ ಮಾತನಾಡಿ, ಒಬ್ಬ ವಿದ್ಯಾರ್ಥಿ ಒಂದು ಗಿಡ ನೆಟ್ಟರೆ ಇಡೀ ಊರೇ ನಂದನವನವಾಗುತ್ತದೆ. ಸಸಿ ನೆಡುವದಷ್ಟೇ ಮುಖ್ಯವಲ್ಲ, ಅದು ಬೆಳೆಯುವವರೆಗೂ ಜೋಪಾನ ಮಾಡುವದು ನಮ್ಮೆಲ್ಲರ ಕರ್ತವ್ಯ ಎಂದರು. ಪ್ರೊ. ಎಂ.ಎಸ್. ಬೇವೂರ ಸಂದರ್ಭೋಚಿತವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿ ಪ್ರೊ. ಎನ್.ಆರ್. ಹಿರೇಸಕ್ಕರಗೌಡ್ರ, ಡಾ. ಎಸ್.ಬಿ. ಸಜ್ಜನರ, ಡಾ. ಕುಮಾರ ಹಂಜಗಿ, ಪ್ರೊ. ಎಸ್. ವಾಯ್. ಪೂಜಾರ, ಅತಿಥಿ ಉಪನ್ಯಾಸಕರು, ಸಿಬ್ಬಂದಿ ವರ್ಗ, ಎನ್‌ಎಸ್‌ಎಸ್ ಸ್ವಯಂ ಸೇವಕರು, ಮಹಾವಿದ್ಯಾಲಯದ ಪ್ರಧಾನ ಕಾರ್ಯದರ್ಶಿ ರವಿಚಂದ್ರ ಕುರಿ, ಮಹಿಳಾ ಪ್ರತಿನಿಧಿ ಶೋಭಾ ಗೋಲಗೌಡ್ರ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಆರ್‌ಎಮ್‌ಎಸ್‌ಎಸ್ ನರ್ಸಿಂಗ್ ವಿದ್ಯಾರ್ಥಿಗಳ ಸಾಧನೆ





■ವಿಜಯಸಾಕ್ಷಿ ಸುದ್ದಿ, ಗದಗ

ಏಪ್ರಿಲ್ 2024ರಲ್ಲಿ ನಡೆದ ಪ್ರಥಮ ಸೆಮಿಸ್ಟರ್ ಬಿ.ಎಸ್‌ಸಿ ನರ್ಸಿಂಗ್ ಫಲಿತಾಂಶ ಪ್ರಕಟಗೊಂಡಿದ್ದು, ಹುಲಕೋಟಿಯ ಆರ್‌ಎಮ್‌ಎಸ್‌ಎಸ್ ಇನ್ಸ್ಟಿಟ್ಯೂಟ್ ಅಫ್ ನರ್ಸಿಂಗ್ ಸೈನ್ಸಸ್‌ನ ವಿದ್ಯಾರ್ಥಿಗಳು ಶೇ. 90 ಫಲಿತಾಂಶ ದಾಖಲಿಸಿದ್ದಾರೆ.

ಪರೀಕ್ಷೆಗೆ ಹಾಜರಾಗಿದ್ದ 36 ವಿದ್ಯಾರ್ಥಿಗಳಲ್ಲಿ ಸಿಂಧು ಈಳಿಗೇರ ಶೇ. 82.5 ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ, ಸೌಮ್ಯ ಲಕ್ಷ್ಮಣ ಭಾಗೋಜಿ (ಶೇ. 80) ದ್ವಿತೀಯ, ಸೃಷ್ಟಿ ಲಕ್ಷ್ಮಣ ನಾಯ್ಕ (ಶೇ. 75) ತೃತೀಯ ಸ್ಥಾನ ಪಡೆದಿದ್ದಾರೆ. 3 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 25 ವಿದ್ಯಾರ್ಥಿಗಳು ಫಸ್ಟ್ ಕ್ಲಾಸ್ ಮತ್ತು ಇನ್ನುಳಿದ 8 ವಿದ್ಯಾರ್ಥಿಗಳು ಸೆಕೆಂಡ್ ಕ್ಲಾಸ್ ಮೂಲಕ ಉತ್ತಮ ಫಲಿತಾಂಶ ನೀಡಿದ್ದಾರೆ.

ಸಂಸ್ಥೆಯ ಅಧ್ಯಕ್ಷರಾದ ಡಾ. ಎಸ್.ಆರ್. ನಾಗನೂರ, ಗೌರವ ಕಾರ್ಯದರ್ಶಿ ಡಾ. ವೇಮನ್ ಸಾವಕಾರ, ಕಾಲೇಜಿನ ಪ್ರಾಂಶುಪಾಲ ಬಸಯ್ಯ ಹಿರೇಮಠ ಹಾಗೂ ಸಿಬ್ಬಂದಿ ವರ್ಗದವರು ಸಂತಸ ವ್ಯಕ್ತಪಡಿಸಿ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

## ಪ್ರಾಚಾರ್ಯರಾಗಿ ಡಾ. ಪ್ರಭು ಗಂಜಿಹಾಳ ಅಧಿಕಾರ ಸ್ವೀಕಾರ



■ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಶ್ರೀ ಕಲ್ಮೇಶ್ವರ ವಿದ್ಯಾಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಪದವಿ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತಕೋತ್ತರ ಕೇಂದ್ರದ ನೂತನ ಪ್ರಾಚಾರ್ಯರಾಗಿ ಡಾ. ಪ್ರಭು ಗಂಜಿಹಾಳ ಅಧಿಕಾರ ವಹಿಸಿಕೊಂಡರು.

ಕಳೆದ 33ವರ್ಷಗಳಿಂದ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, ವಿಭಾಗದ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿ ಪ್ರಾಚಾರ್ಯರ ಹುದ್ದೆ ಅಲಂಕರಿಸಿರುವ ಡಾ.ಪ್ರಭು ಗಂಜಿಹಾಳ ಅವರಿಗೆ ಮಹಾವಿದ್ಯಾಲಯದ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು. ಸಂಸ್ಥೆಯ ಅಧ್ಯಕ್ಷರಾದ ಬಿ.ಸಿ. ಪಾಟೀಲ, ಗೌರವ ಕಾರ್ಯದರ್ಶಿ ಎಂ.ಎನ್. ತೇಜಿಗೌಡ್ರ ಮತ್ತು ಆಡಳಿತ ಮಂಡಳಿ ಸದಸ್ಯರು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಡಾ. ಎಸ್.ಬಿ. ಸಜ್ಜನರ್, ಪ್ರೊ. ಎನ್.ಆರ್. ಹಿರೇಸಕ್ಕರಗೌಡ್ರ, ಪ್ರೊ. ಎಸ್.ವಾಯ್. ಪೂಜಾರ, ಡಾ. ಕುಮಾರ ಹಂಜಗಿ, ಪ್ರಾಧ್ಯಾಪಕರಾದ ವಿ.ಪಿ. ಪಾಟೀಲ, ಎಂ.ಎಸ್. ಬೇವೂರ, ರೇಷ್ಮಾ ಟಕ್ಕೇದ, ಜಿ.ಎಂ. ಪೊಲೀಸ್‌ಪಾಟೀಲ, ಎಸ್.ಬಿ. ಹಳ್ಳೂರ, ವಿ.ಬಿ. ಜಾಲಿಹಾಳ, ವಿ.ಎಸ್. ಕಪ್ಪಲಿ, ಆನಂದ ಕೆಂಚನಗೌಡರ, ಕೆ.ಎ. ಕೊಪ್ಪದ, ಶಿಲ್ಪ ಮೆದನಾಪೂರ, ಎಸ್.ಜಿ. ಮಾಳವಾಡ ಸೇರಿದಂತೆ ಬೋಧಕ-ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಹಳ್ಳಿಗಳು ಭಾಂಧವ್ಯದ ನೆಲೆಬೀಡು



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಶ್ರೀಮಂತ ಪರಂಪರೆಯಿಂದ ಕೂಡಿದ ಹಳ್ಳಿಗಳನ್ನು ಹೊಂದಿದ ಭವ್ಯ ಪರಂಪರೆಯ ದೇಶ. ಹಳ್ಳಿಯ ಜೀವನ ನಂಬಿಕೆ, ವಿಶ್ವಾಸ, ಪರಸ್ಪರ ಗೌರವದಿಂದ ಕೂಡಿದ್ದು. ಜಾತಿ, ಮತ, ಬೇಧ ಮರೆತು ಒಂದಾಗಿ ಸಹಕಾರ ಜೀವನ ನಡೆಸುವ ನಮ್ಮ ಹಳ್ಳಿಗಳು ಆತ್ಮೀಯತೆ ಮತ್ತು ಭಾಂಧವ್ಯದ ನೆಲೆಬೀಡಾಗಿದೆ ಎಂದು ಕಲ್ಯಾಣಸಿರಿ ಫೌಂಡೇಶನ್ ಅಧ್ಯಕ್ಷ ಪ್ರಾ. ಬಿ.ಬಿ. ಗೌಡರ ಅಭಿಪ್ರಾಯಪಟ್ಟರು.

ಕಲ್ಯಾಣಸಿರಿ ಕಾಲೇಜಿನಲ್ಲಿ ನಡೆದ ಮೋಜಿನ ಸಪ್ತಾಹದ ಕೊನೆಯ ದಿನ 'ಹಳ್ಳಿಯ ಸೊಗಡು' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರೊ. ಬಿ.ಎಮ್. ನದಿಮುಲ್ಲಾ ಮಾತನಾಡಿ, ಹಳ್ಳಿಯ ಉಡುಗೆ-ತೊಡುಗೆಗಳು, ಆಟೋಟಗಳು, ಉತ್ತಮ ಸಂಪ್ರದಾಯಗಳು ಇಂದು ಕಣ್ಮರೆಯಾಗುತ್ತಿರುವುದು ಖೇದಕರ ಸಂಗತಿ. ಇಂದಿನ ಯುವಕರು ನಮ್ಮ ಹಳ್ಳಿಗಳ ಮೂಲ ಸಂಸ್ಕೃತಿಯನ್ನು ರೂಢಿಸಿಕೊಂಡು ಉಳಿಸಿಕೊಂಡು ಹೋಗಬೇಕೆಂದು ಕಿವಿ ಮಾತು ಹೇಳಿದರು.

ಡಾ. ಗಣೇಶ ಸುಲ್ತಾನಪುರ ಮಾತನಾಡಿ, ವ್ಯಕ್ತಿತ್ವ ವಿಕಸನಕ್ಕೆ ವಿಷಯ ಜ್ಞಾನದ ಜೊತೆಗೆ ವ್ಯಕ್ತಿತ್ವ ಬೆಳೆಸಿಕೊಳ್ಳುವ, ಸಾಮಾನ್ಯ ವ್ಯವಹಾರ ಜ್ಞಾನ ಬೆಳೆಸಿಕೊಳ್ಳುವುದು ಮುಖ್ಯವಾಗಿದೆ. ಉತ್ತಮ ಜೀವನಕ್ಕೆ ಜ್ಞಾನದ ಜೊತೆ ವಾಸ್ತವಿಕ ಅರಿವು ಅಗತ್ಯ ಎಂದರು. ಆಡಳಿತ ಮಂಡಳಿಯ ಉಪಾಧ್ಯಕ್ಷೆ ಕಸ್ತೂರಮ್ಮ ರಡ್ಡೇರ್ ಮಾತನಾಡಿ, ವಿದ್ಯಾರ್ಥಿಗಳು ಮಾನವೀಯ ಗುಣಗಳನ್ನು, ಸಂಸ್ಕೃತಿಗಳು, ಆಚಾರ, ವಿಚಾರಗಳನ್ನು ಗೌರವಿಸಿ, ಪರಸ್ಪರರನ್ನು ಪ್ರೀತಿ-ವಿಶ್ವಾಸದಿಂದ ಬದುಕುವ ಸಾಮಾಜಿಕ ಸಂಸ್ಕೃತಿಗೆ ಹಳ್ಳಿಗಳು ಉದಾಹರಣೆಯಾಗಿವೆ ಎಂದರು.

ಗೀತಾ ನಂದಿಕೋಲಮಠ ಮಾತನಾಡಿದರು. ಭಾಗ್ಯ ಸಾಲಿ ಪ್ರಾರ್ಥಿಸಿದರು. ಪ್ರೊ. ಪರಿಮಳ ಗುರವ ಸ್ವಾಗತಿಸಿದರು. ಡಾ. ರೇಣುಕಾ ನವಲಗುಂದ ನಿರೂಪಿಸಿದರು. ಪ್ರೊ. ಸಂತೋಷ ಡೋಣಿ ವಂದಿಸಿದರು.

### 'ಅಸ್ತಮಾ ಯಜ್ಞ'ದಲ್ಲಿ ಬೆಳ್ಳಟ್ಟಿ ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಮಹಾಸ್ವಾಮಿಗಳು

# ಆಹಾರ ಪದ್ಧತಿಯೇ ರೋಗಕ್ಕೆ ಮೂಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದಿನ ಫಾಸ್ಟ್‌ಫುಡ್ ಯುಗದಲ್ಲಿ ಆಯುರ್ವೇದ ಔಷಧಿ ಮತ್ತು ಸಾಂಪ್ರದಾಯಿಕ ಆಹಾರ ಪದ್ಧತಿಯನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದು ಬೆಳ್ಳಟ್ಟಿ ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದ ಪ್ರಾಥಮಿಕ ಶಾಲೆ ನಂ.1ರ ಆವರಣದಲ್ಲಿ ಶನಿವಾರ 58ನೇ ವರ್ಷದ ಅಸ್ತಮಾ ಯಜ್ಞದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯಾವುದೇ ರೋಗವಿರಲಿ, ಅದಕ್ಕೆ ಮೂಲ ಕಾರಣ ನಮ್ಮ ಆಹಾರ ಪದ್ಧತಿ. ಎಲ್ಲರೂ ನಮ್ಮ ಹಿರಿಯರು ಬಳಸುತ್ತಿದ್ದ ಸಾಂಪ್ರದಾಯಿಕ ಆಹಾರ ಪದ್ಧತಿಗೆ ಮಹತ್ವ ಕೊಡಬೇಕಿದೆ. ಇದೀಗ ಪ್ರತಿಯೊಂದು ಆಹಾರದಲ್ಲಿಯೂ ಕಲಬೆರಕೆ ಕಾಣುತ್ತಿದ್ದು, ಇದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತಿವೆ. ರೈತರು ಆರ್ಥಿಕ ಸಮಸ್ಯೆಯಿಂದಾಗಿ ತಾವು ಬೆಳೆದ ಬೆಳೆಯನ್ನು ಮಾರಿ ಕಲಬೆರಕೆ ಪದಾರ್ಥಗಳನ್ನು ಕೊಳ್ಳುತ್ತಿದ್ದಾರೆ. ಗಿಡಮೂಲಿಕೆಗಳನ್ನು ಬಳಸಿ ಆಯುರ್ವೇದ ಪದ್ಧತಿಯಲ್ಲಿ ಔಷಧಿ ನೀಡುವದರಿಂದ ಹಲವಾರು



ರೋಗಗಳನ್ನು ಗುಣಪಡಿಸಬಹುದಾಗಿದೆ ಎಂದರು.

ವೈದ್ಯ ಡಾ. ಸುಧೀಂದ್ರ ದೇಶಪಾಂಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೃಷ್ಣ ಕುಲಕರ್ಣಿ ಮಾತನಾಡಿ, ಪಟ್ಟಣದಲ್ಲಿ ಇದೊಂದು ಪರಂಪರೆಯನ್ನು ಹಾಕಿಕೊಟ್ಟಿರುವ ದಿ.ವೈದ್ಯ ಬಾಬುರಾವ ಕುಲಕರ್ಣಿ ಅವರ ಹೆಸರು ಚಿರಸ್ಥಾಯಿಯಾಗಿ ಉಳಿಯುವಂತಾಗಿದೆ. ಇಲ್ಲಿನ ಹಾಲಮಠ ಸಮಾಜ ಬಾಂಧವರ ಸೇವೆ ಸದಾ ಸ್ಮರಣೀಯವಾಗಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ಹಿರಿಯರಾದ ಪಲ್ಲಣ್ಣನವರು ಕುಲಕರ್ಣಿ ವಹಿಸಿದ್ದರು. ಡಾ.ಹರೀಶ ಕುಲಕರ್ಣಿ, ಪ್ರಕಾಶ ಪಾಟೀಲ, ಪುರಸಭೆ ಮಾಜಿ ಅಧ್ಯಕ್ಷರುಗಳಾದ ವ್ಹಿ.ಜಿ. ಪಡಗೇರಿ, ಎಂ.ಆರ್. ಪಾಟೀಲ ನಿಂಗಪ್ಪ ಬನ್ನಿ, ಚಂಬಣ್ಣ ಬಾಳಿಕಾಯಿ, ಗೋಪಾಲ ಪಡ್ನೇಸ್, ವ್ಹಿ.ಎಲ್. ಪೂಜಾರ, ನಿಂಗಪ್ಪ ತಹಸೀಲ್ದಾರ, ಗುರುರಾಜ ಕುಲಕರ್ಣಿ, ಅನಿಲ ಕುಲಕರ್ಣಿ, ಮಂತ್ರಾಲಯ ಪಾದಯಾತ್ರಾ ಸಂಘದ ಸದಸ್ಯರು ಸೇರಿದಂತೆ ಮುಂತಾದವರಿದ್ದರು. ಡಿ.ಎಂ. ಪೂಜಾರ ವಂದಿಸಿದರು.

ರಾಜ್ಯದ ಮೂಲೆ ಮೂಲೆಗಳಿಂದ ಜನರು ಔಷಧಿ ಪಡೆಯಲು ಆಗಮಿಸಿದ್ದರು. ಮುಂಜಾನೆ 7.11ಕ್ಕೆ ಮೃಗಶಿರಾ ಮಳೆಯ ನಕ್ಷತ್ರದ ಹಿನ್ನೆಲೆಯಲ್ಲಿ ಆಗಮಿಸಿದ್ದ ಸುಮಾರು 4-5 ಸಾವಿರ ಜನರು ಜಿಟಿ ಜಿಟಿ ಮಳೆಯ ನಡುವೆಯು ಶಾಂತರಾಗಿ ಕುಳಿತುಕೊಂಡು ಔಷಧಿ ಸೇವಿಸಿದರು.

ಕಳೆದ 58 ವರ್ಷಗಳಿಂದ ಮೃಗಶಿರಾ ಮಳೆಯ ನಕ್ಷತ್ರದ ವೇಳೆಗೆ ಅಸ್ತಮಾ ರೋಗಿಗಳಿಗೆ ಉಚಿತ ಆಯುರ್ವೇದ ಔಷಧಿ ನೀಡುವ ಮೂಲಕ ಲಕ್ಷಾಂತರ ಜನರನ್ನು ಈ ರೋಗದಿಂದ ವಾಸಿ ಮಾಡಿದ ಕೀರ್ತಿ ದಿ.ಬಾಬುರಾವ ಕುಲಕರ್ಣಿಯವರಿಗೆ ಸಲ್ಲುತ್ತದೆ. ಔಷಧಕ್ಕಾಗಿ ಇಲ್ಲಿ ಸೇರಿರುವ ಜನಸಂದಣಿಯನ್ನು ನೋಡಿದಾಗ ಆ ಔಷಧಿಯ ಮಹತ್ವ ಅರ್ಥವಾಗುತ್ತದೆ. ಇಲ್ಲಿ ಬಂದಿರುವ ಎಲ್ಲರೂ ಬೇಗ ಗುಣಮುಖರಾಗಲಿ ಎಂದು ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಮಹಾಸ್ವಾಮಿಗಳು ಹಾರೈಸಿದರು.

# ಸುರಕ್ಷಿತ ಆಹಾರ ಸರ್ವರ ಜವಾಬ್ದಾರಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸುರಕ್ಷಿತ ಹಾಗೂ ಗುಣಮಟ್ಟ ಆಹಾರವು ಮಾನವನ ಆರೋಗ್ಯಕ್ಕೆ ತುಂಬಾ ಅವಶ್ಯಕವಾಗಿದ್ದು, ಮನುಷ್ಯನ ಆರೋಗ್ಯಕರ ಬೆಳವಣಿಗೆಗೆ ಮತ್ತು ಅಂಗಾಂಗಗಳ ಉತ್ತಮ ಕಾರ್ಯ ನಿರ್ವಹಣೆಗೆ ಪೂರಕವಾಗಿದೆ. ಸುರಕ್ಷಿತ ಮತ್ತು ಗುಣಮಟ್ಟದ ಆಹಾರ ಸರ್ವರ ಜವಾಬ್ದಾರಿಯಾಗಿದೆ ಎಂದು ಗದಗ ಜಿಲ್ಲಾ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿ ಡಾ. ರಾಜೇಂದ್ರ ಎಸ್.ಗಡಾದ ಹೇಳಿದರು.

ಅವರು ಶನಿವಾರ ಪಟ್ಟಣದ ಫೀನಿಕ್ಸ್ ಇಂಟರ್‌ನ್ಯಾಷನಲ್, ಜಿಲ್ಲಾ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ಆರೋಗ್ಯ ಇಲಾಖೆ ಹಾಗೂ ಸ್ಪೂರ್ತಿ ಶಿಕ್ಷಣ ಮತ್ತು ವಿವಿಧೋದ್ದೇಶಗಳ ಅಭಿವೃದ್ಧಿ ಸಂಸ್ಥೆ ಇವುಗಳ ಆಶ್ರಯದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ವಿಶ್ವ ಆಹಾರ ಸುರಕ್ಷತಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಸುರಕ್ಷಿತ ಆಹಾರ ಮತ್ತು ಗುಣಮಟ್ಟ ಆಹಾರ ಎಂಬ ವಿಷಯ ಕುರಿತು ಉಪನ್ಯಾಸ ನೀಡಿ ಮಾತನಾಡಿದರು.

ಸಂಸ್ಥೆಯ ನಿರ್ದೇಶಕ ಎಸ್.ಬಿ.ಕೊಣ್ಣೂರ ಅವರು ಮಾತನಾಡಿದರು. ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮವನ್ನು ಸಂಸ್ಥೆಯ ಕಾರ್ಯದರ್ಶಿ ಶಿವಯೋಗಿ ಗಾಂಜಿ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಖಜಾಂಚಿ ಕಿರಣ ನಾಲ್ವಾಡ ವಹಿಸಿದ್ದರು. ಕುಮಾರಸ್ವಾಮಿಮಠ ಪ್ರಾರ್ಥಿಸಿದರು. ಶಿಕ್ಷಕಿ ಶಾಂಭವಿ ಅಕ್ಕುರ ಸ್ವಾಗತಿಸಿದರು. ಶಿಕ್ಷಕ ಕಾಂತೇಶ್ ಮುದುಗಲ್ ನಿರೂಪಿಸಿ ವಂದಿಸಿದರು.

### ರೋಟರಿ ಕ್ಲಬ್ ಗದಗ-ಬೆಟಗೇರಿಯಿಂದ

# ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ ಯಶಸ್ವಿ




■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಹಾಗೂ ರೋಟರಿ ಕ್ಲಬ್ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 191ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ಐವರು ಫಲಾನುಭವಿಗಳಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು.

ಲಿಂ. ಮಹಾಂತಪ್ಪ ಬಸಪ್ಪ ಬಡ್ನಿ ಇವರ ಸ್ಮರಣಾರ್ಥ ಪುಷ್ಪಲತಾ ಮಹಾಂತಪ್ಪ ಬಡ್ನಿ ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 30 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 5 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯನ್ನು ಕೈಗೊಂಡರು.

ಶಸ್ತ್ರ ಚಿಕಿತ್ಸೆಯ ನಂತರ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರ ವಹಿಸಿ ಸರ್ವರನ್ನೂ ಸ್ವಾಗತಿಸಿ, ಸಂಸ್ಥೆಯ ಕಾರ್ಯಕ್ರಗಳನ್ನು ತಿಳಿಸಿದರು. ಐ.ಒ.ಎಲ್ ಚೇರಮನ್ ರೊ. ಡಾ. ಶೇಖರ ಡಿ.ಸಜ್ಜನರ ಮಾತನಾಡಿ, ರೋಟರಿ ಸಂಸ್ಥೆಯು ಕಳೆದ 22 ವರ್ಷಗಳಿಂದ ಈ ಶಿಬಿರವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದು, ಶಿಬಿರದ ಪ್ರಾಯೋಜತ್ವವನ್ನು ವಹಿಸಿದ ಪುಷ್ಪಲತಾ ಬಡ್ನಿಯವರಿಗೆ ಧನ್ಯವಾದಗಳನ್ನು ತಿಳಿಸಿದರಲ್ಲದೆ, ಲಿಂಗೈಕ್ಯ ಮಹಾಂತಪ್ಪ ಬಡ್ನಿಯವರು ಕೈಗೊಂಡ ಸಮಾಜಿಕ ಕಾರ್ಯಗಳನ್ನು ಸ್ಮರಿಸಿ ನುಡಿನಮನ ಸಲ್ಲಿಸಿದರು.

ಪ್ರಾಯೋಜತ್ವವನ್ನು ವಹಿಸಿದ್ದ ಪುಷ್ಪಲತಾ ಬಡ್ನಿಯವರ ಪುತ್ರ ಮುರಗೇಶ ಬಡ್ನಿ ಮಾತನಾಡಿದರು. ರೋಟರಿ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿಯವರು, ಮುರಿಗೇಶ ಬಡ್ನಿ, ಪುಷ್ಪಲತಾ ಬಡ್ನಿ, ಪ್ರತಿಭಾ ಬಡ್ನಿ, ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ವೆಲ್ ಫೇರ್ ಸೊಸೈಟಿಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು ವಂದಿಸಿದರು. ರೋಟರಿ ಸಂಸ್ಥೆಯ ಸದಸ್ಯರಾದ ರೊ. ತಿರ್ಲಾಪೂರ, ರೊ. ಶಿವಾಚಾರ್ಯ ಎಸ್. ಹೊಸಳ್ಳಿಮಠ, ರೊ. ಡಾ. ಆರ್.ಬಿ. ಉಪ್ಪಿನ, ರೊ. ಡಾ. ಪ್ರದೀಪ ಉಗಲಾಟ, ರೊ. ಹೆಚ್.ಎಸ್. ಪಾಟೀಲ, ರೊ. ಅಕ್ಷಯ ಶೆಟ್ಟಿ, ರೊ. ಚನ್ನವೀರ ಹುಣಶಿಕಟ್ಟಿ, ರೊ. ಮಹಾಂತೇಶ ಬಾತಾಖಾನಿ ಮುಂತಾದವರು ಉಪಸ್ಥಿತರಿದ್ದರು. ಶಿಬಿರದಲ್ಲಿ ರುದ್ರೇಶ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ಸಹಕರಿಸಿದರು.

# ಲೋಕಸಭೆ ವಿಪಕ್ಷ ನಾಯಕನಾಗಿ ರಾಹುಲ್ ಗಾಂಧಿ ನೇಮಿಸಲು ನಿರ್ಣಯ ಕೈಗೊಂಡ ಕಾಂಗ್ರೆಸ್: ವರದಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆಯ ವಿರೋಧ ಪಕ್ಷದ ನಾಯಕರಾಗಿ ರಾಹುಲ್ ಗಾಂಧಿ ಅವರನ್ನು ನೇಮಿಸಬೇಕು ಎಂಬ ನಿರ್ಣಯವನ್ನು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಅಂಗೀಕರಿಸಿದೆ ಎಂದು ವರದಿಯಾಗಿದೆ.


ಲೋಕಸಭೆ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅವರು ಉತ್ತರ ಪ್ರದೇಶದ ರಾಯ್ ಬರೇಲಿ ಮತ್ತು ಕೇರಳದ ವಯನಾಡ್ ಕ್ಷೇತ್ರಗಳಿಂದ ಸ್ಪರ್ಧಿಸಿ ಗೆಲುವು ದಾಖಲಿಸಿದ್ದಾರೆ.

ಸಿಡಬ್ಲ್ಯುಸಿ ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕಾಂಗ್ರೆಸ್ ಸಂಸದೆ ಕುಮಾರಿ ಸೆಲ್ಜಾ ಅವರು, "ರಾಹುಲ್ ಗಾಂಧಿ ಅವರನ್ನು ಲೋಕಸಭೆಯ ವಿಪಕ್ಷ ನಾಯಕನಾಗಿ ಆಯ್ಕೆ ಮಾಡಬೇಕೆಂಬುದು ಸಿಡಬ್ಲ್ಯೂಸಿಯ ಆಶಯವಾಗಿದೆ" ಎಂದಿದ್ದಾರೆ.

ಹಿರಿಯ ಕಾಂಗ್ರೆಸ್ ನಾಯಕ ಮತ್ತು ಕೇರಳದ ಅಲಪ್ಪುಝ ಕ್ಷೇತ್ರದಿಂದ ಹೊಸದಾಗಿ ಚುನಾಯಿತರಾದ ಸಂಸದ ಕೆಸಿ ವೇಣುಗೋಪಾಲ್ ಮಾತನಾಡಿ "ಸಿಡಬ್ಲ್ಯುಸಿ ಲೋಕಸಭೆಯ ವಿರೋಧ ಪಕ್ಷದ ನಾಯಕನ ಜವಾಬ್ದಾರಿಯನ್ನು ವಹಿಸಿಕೊಳ್ಳಲು ರಾಹುಲ್ ಗಾಂಧಿ ಅವರಿಗೆ ಸರ್ವಾನುಮತದಿಂದ ವಿನಂತಿಸಿದೆ" ಎಂದು ತಿಳಿಸಿದ್ದಾರೆ.

ಸಿಡಬ್ಲ್ಯುಸಿ ಚುನಾವಣಾ ಪ್ರಚಾರದ ಸಮಯದಲ್ಲಿ ರಾಹುಲ್ ಗಾಂಧಿಯವರು ಪಕ್ಷದ ಗೆಲುವಿಗೆ ನಡೆಸಿದ ಪ್ರಯತ್ನಗಳನ್ನು ಶ್ಲಾಘಿಸಿದೆ ಎಂದು ತಿಳಿದು ಬಂದಿದೆ.

## ಕರ್ತವ್ಯ ಲೋಪ ಆರೋಪ: ಪೊಲೀಸ್ ಇನ್ಸ್‌ಪೆಕ್ಟರ್ ನದಾಫ್ ಸಸ್ಪೆಂಡ್




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ತವ್ಯ ಲೋಪ ಎಸಗಿದ ಆರೋಪದ ಹಿನ್ನೆಲೆಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಒಬ್ಬರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ.

ಗದಗ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಎಮ್ ಎಮ್ ನದಾಫ್ ಅಮಾನತು ಆದ ಅಧಿಕಾರಿ.

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಆದೇಶ ಹೊರಡಿಸಿದ್ದು, ಇಲಾಖಾ ತನಿಖೆಗೂ ಮೇಲಾಧಿಕಾರಿಗಳಿಗೆ ವರದಿ ಕಳುಹಿಸಲಾಗಿದೆ ಎಂದು ಎಸ್ಪಿ ಬಿ.ಎಸ್. ನೇಮಗೌಡ ಮಾಹಿತಿ ನೀಡಿದ್ದಾರೆ.

ಕಳೆದ ಜೂ.4ರಂದು ಜಿಮ್ಸ್ ಆಸ್ಪತ್ರೆಯ ಬಳಿ ಇರುವ ಖಾಸಗಿ ಮೆಡಿಕಲ್ ಶಾಪ್‌ನಲ್ಲಿ ಗಲಾಟೆಯಾಗಿತ್ತು. ಆ ಪ್ರಕರಣದಲ್ಲೂ ಕರ್ತವ್ಯ ಲೋಪ ಎಸಗಿದ ಆರೋಪ ಕೇಳಿ ಬಂದಿತ್ತು. ಜೂ.6ರಂದು ಅಡವಿಸೋಮಾಪೂರ ಸಣ್ಣ ತಾಂಡಾದಲ್ಲಿ ಎರಡು ಕುಟುಂಬಗಳ ನಡುವೆ ಇದ್ದ ವಿವಾದ ವಿಕೋಪಕ್ಕೆ ಹೋಗಿತ್ತು. ಕೆಲವರು ಮನೆಗೆ ನುಗ್ಗಿ ಮಹಿಳೆಯರು ಸೇರಿದಂತೆ ಅನೇಕರ ಮೇಲೆ ಹಲ್ಲೆ ಮಾಡಿದ್ದರು. ಇದಕ್ಕೂ ಮೊದಲು ಈ ಕಲಹ ಗ್ರಾಮೀಣ ಠಾಣೆಯ ಮೆಟ್ಟಲೇರಿತ್ತು.

ಈ ಪ್ರಕರಣವನ್ನು ಸರಿಯಾಗಿ ನಿಭಾಯಿಸುವಲ್ಲಿ ಲೋಪ ಎಸಗಿದ್ದಲ್ಲದೆ ಲಂಚ ಪಡೆದ ಆರೋಪ ಕೂಡ ಹಲ್ಲೆಗೊಳಗಾದವರಿಂದ ಕೇಳಿ ಬಂದಿತ್ತು.

ಮೊನ್ನೆ ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಆವರಣದಲ್ಲಿ ಅಡವಿಸೋಮಾಪೂರ ಸಣ್ಣ ತಾಂಡಾದ ಹಲ್ಲೆಗೊಳಗಾದ ಜನರು ಪೊಲೀಸ್ ಇನ್ಸ್‌ಪೆಕ್ಟರ್ ನದಾಫ್ ದೂರು ಕೊಟ್ಟರೂ ಸರಿಯಾಗಿ ನಿಭಾಯಿಸಿಲ್ಲ. ಆರೋಪಿತರಿಂದ ಲಂಚ ಪಡೆದಿದ್ದಾರೆ ಎಂದು ತಾಂಡಾದ ಜನರು ಗಲಾಟೆ ಮಾಡಿ ಸ್ಥಳದಲ್ಲಿದ್ದ ಇನ್ಸ್‌ಪೆಕ್ಟರ್ ನದಾಫ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು.

ಈ ಎರಡೂ ಪ್ರಕರಣದಲ್ಲಿ ಕರ್ತವ್ಯ ಲೋಪ ಎಸಗಿರುವ ಆರೋಪದ ಹಿನ್ನೆಲೆಯಲ್ಲಿ ಎಸ್ಪಿ ಬಿ.ಎಸ್. ನೇಮಗೌಡ ಅವರು ಸಸ್ಪೆಂಡ್ ಮಾಡಿ ಆದೇಶ ಹೊರಡಿಸಿದ್ದಾರೆ.

## ಮಣಿಪುರದ ಜಿರಿಬಾಮ್‌ನಲ್ಲಿ ಹಲವು ಮನೆಗಳಿಗೆ ಬೆಂಕಿ ಹಚ್ಚಿದ ಸಶಸ್ತ್ರದಾರಿಗಳು

■ವಿಜಯಸಾಕ್ಷಿ ಸುದ್ದಿ, ಮಣಿಪುರ

ಹಿಂಸಾಚಾರ ಪೀಡಿತ ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿ ಸಶಸ್ತ್ರದಾರಿಗಳ ಗುಂಪೊಂದು ಪೊಲೀಸ್ ಔಟ್‌ಪೋಸ್ಟ್‌ಗೆ ಮತ್ತು ಹಲವು ಮನೆಗಳಿಗೆ ಬೆಂಕಿ ಹಚ್ಚಿದೆ.

ಬರಾಕ್ ನದಿಯ ದಡದಲ್ಲಿರುವ ಚೋಟೊಬೆಕ್ರಾ ಪ್ರದೇಶದಲ್ಲಿರುವ ಜಿರಿ ಪೊಲೀಸ್ ಔಟ್‌ಪೋಸ್ಟನ್ನು ಸಶಸ್ತ್ರದಾರಿಗಳು ಮಧ್ಯರಾತ್ರಿ 12.30ರ ಸುಮಾರಿಗೆ ಸುಟ್ಟು ಹಾಕಿದ್ದಾರೆ. ಬೆಟ್ಟದ ಮೂಲದ ಬಂದೂಕುಧಾರಿಗಳು ರಾಜ್ಯದ ರಾಜಧಾನಿ ಇಂಫಾಲ್‌ನಿಂದ ಸುಮಾರು 220 ಕಿಮೀ ದೂರದಲ್ಲಿರುವ ಜಿಲ್ಲೆಯ ಮೊಧುಪುರ್ ಪ್ರದೇಶದ ಲಾಮ್ಟಾಯ್ ಖುನೌನಲ್ಲಿ ಕಗ್ಗತ್ತಲಿನಲ್ಲಿ ದಾಳಿಗಳನ್ನು ನಡೆಸಿದ್ದಾರೆ. ಈ ವೇಳೆ ಹಲವಾರು ಮನೆಗಳು ಸುಟ್ಟುಹೋಗಿವೆ. ಹೆಚ್ಚಾಗಿ ಜಿರಿಬಾಮ್ ಜಿಲ್ಲೆಯ ಹೊರವಲಯಗಳಲ್ಲಿ ಮನೆಗಳು ಸುಟ್ಟು ಹೋಗಿದೆ. ಈ ಬಗ್ಗೆ ನಿಖರವಾದ ಸಂಖ್ಯೆಯನ್ನು ಖಚಿತಪಡಿಸಲು ಸಾಧ್ಯವಿಲ್ಲ ಎಂದು ಜಿರಿಬಾನ್‌ನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಂಡುಕೋರರ ವಿರುದ್ಧದ ಭದ್ರತಾ ಕಾರ್ಯಾಚರಣೆಯಲ್ಲಿ ನೆರವಾಗಲು ಮಣಿಪುರ ಪೊಲೀಸರ ಕಮಾಂಡೋ ತುಕಡಿಯನ್ನು ಶನಿವಾರ ಬೆಳಗ್ಗೆ ಇಂಫಾಲ್‌ನಿಂದ ಜಿರಿಬಾಮ್‌ಗೆ ವಿಮಾನದಲ್ಲಿ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka